ಸಂಪುಟ : 11 ಸಂಚಿಕೆ: 100 ಪುಟ : 4+2 ಬೆಲೆ: 3.00 ಗುರುವಾರ ಮೇ 21 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 100 Pages : 4+2 Price : 3.00 Thursday May 21 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸರ್ಕಾರದ 3 ವರ್ಷದ ಆಡಳಿತ ಶೂನ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದರೂ, ಜನಪರ ಆಡಳಿತ ನೀಡುವಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಬಿಜೆಪಿ ಗದಗ ಜಿಲ್ಲಾ ಅಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಆರೋಪಿಸಿದರು. ಈ ಕುರಿತು ಬುಧವಾರ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿದ ಅವರು, ಮುಖ್ಯಮಂತ್ರಿ ಸ್ಥಾನ ಬದಲಾವಣೆ ಕುರಿತ ಚರ್ಚೆಗಳಲ್ಲೇ ಸರ್ಕಾರ ಮುಳುಗಿದ್ದು, ಜನರ ಸಮಸ್ಯೆಗಳು ನಿರ್ಲಕ್ಷ್ಯಕ್ಕೆ ಒಳಗಾಗಿವೆ ಎಂದು ಟೀಕಿಸಿದರು.

"ಸರ್ಕಾರದ ಒಳಜಗಳದಿಂದ ಆಡಳಿತ ಯಂತ್ರ ಸಂಪೂರ್ಣ ಕುಸಿದಿದೆ. ಅಭಿವೃದ್ಧಿ ಕಾರ್ಯಗಳು ಹಿನ್ನೆಡೆಯಾಗಿದ್ದು, ರಾಜ್ಯದ ಜನರು ಈಗ ಬದಲಾವಣೆ ಬಯಸುತ್ತಿದ್ದಾರೆ" ಎಂದು ಹೇಳಿದರು. "ಆರ್‌ಎಸ್‌ಎಸ್, ಕೇಂದ್ರ ಸರ್ಕಾರ ಹಾಗೂ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ನಿರಂತರ ಆರೋಪ ಮಾಡುವುದೇ ಕಾಂಗ್ರೆಸ್ ಸರ್ಕಾರದ ಮೂರು ವರ್ಷದ ಸಾಧನೆಯಾಗಿದೆ" ಎಂದು ವ್ಯಂಗ್ಯವಾಡಿದ ಅವರು, ಸರ್ಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲೂ ಪಾರದರ್ಶಕತೆ ಇಲ್ಲ ಎಂದು ದೂರಿದರು. "ಗೃಹಲಕ್ಷ್ಮಿ ಯೋಜನೆಯಡಿ ಎಷ್ಟು ಜನರಿಗೆ ಹಣ ತಲುಪಿದೆ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು. ₹5 ಸಾವಿರ ಕೋಟಿ ಎಲ್ಲಿಗೆ ಹೋಗಿದೆ ಎಂಬುದು ಇನ್ನೂ ಬಹಿರಂಗವಾಗಿಲ್ಲ" ಎಂದು ಪ್ರಶ್ನಿಸಿದರು.

"ಯುವ ನಿಧಿ ಯೋಜನೆ ಏನಾಯಿತು ಎಂಬುದು ಜನರಿಗೆ ಇನ್ನೂ ಗೊತ್ತಾಗಿಲ್ಲ. ಖಜಾನೆ ತುಂಬಿಸಿಕೊಳ್ಳಲು ಸರ್ಕಾರ ಬೆಲೆ ಏರಿಕೆ ಮಾಡುತ್ತಿದೆ. ಸಾಲ ಮಾಡುವುದರಲ್ಲಿ ಕರ್ನಾಟಕದ ಕಾಂಗ್ರೆಸ್ ಸರ್ಕಾರ ನಂ.1 ಸ್ಥಾನದಲ್ಲಿದೆ. ಇದೇ ಸರ್ಕಾರದ ಮೂರು ವರ್ಷದ ಸಾಧನೆ" ಎಂದು ತೋಟಪ್ಪ (ರಾಜು) ಕುರುಡಗಿ ವಾಗ್ದಾಳಿ ನಡೆಸಿದರು.

## ಗಂಗಿಮಡಿ ಸಂತ್ರಸ್ತರ ನೆರವಿಗೆ ಜೆಡಿಎಸ್ ನಿಯೋಗ

■ವಿಜಯಸಾಕ್ಷಿ ಸುದ್ದಿ, ಗದಗ

ಅಕಾಲಿಕ ಮಳೆ ಹಾಗೂ ರಭಸದ ಗಾಳಿಯಿಂದ ಹಾನಿಗೊಳಗಾದ ಪ್ರದೇಶಗಳಿಗೆ ಜೆಡಿಎಸ್ ಪಕ್ಷದ ನಿಯೋಗ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಲಿದೆ.

ಜೆಡಿಎಸ್ ಪಕ್ಷದ ರಾಜ್ಯ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ ನೇತೃತ್ವದ ನಿಯೋಗ, ಗದಗ ನಗರದ ಗಂಗಿಮಡಿ ಆಶ್ರಯ ಕಾಲೋನಿಗೆ ಬೆಳಿಗ್ಗೆ 11 ಗಂಟೆಗೆ ಭೇಟಿ ನೀಡಿ ಸಂತ್ರಸ್ತರೊಂದಿಗೆ ಮಾತುಕತೆ ನಡೆಸಲಿದೆ.

ಅಕಾಲಿಕ ಮಳೆ ಹಾಗೂ ಬಿರುಗಾಳಿಯಿಂದ ನೂರಾರು ಮನೆಗಳಿಗೆ ಹಾನಿಯಾಗಿದ್ದು, ಸಂಕಷ್ಟಕ್ಕೆ ಸಿಲುಕಿರುವ ಕುಟುಂಬಗಳ ಸಮಸ್ಯೆಗಳನ್ನು ಆಲಿಸಿ ಅಗತ್ಯ ನೆರವಿನ ಕುರಿತು ಚರ್ಚೆ ನಡೆಸಲಾಗುವುದು ಎಂದು ತಿಳಿಸಲಾಗಿದೆ.

ನಿಯೋಗದಲ್ಲಿ ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ವೀರನಗೌಡ ನಾಡಗೌಡ್ರ, ಸಿದ್ದಲಿಂಗಯ್ಯ ಹೊಂಬಾಳೆಮಠ, ಪ್ರಫುಲ್ ಪುಣೆಕರ ಸೇರಿದಂತೆ ಪಕ್ಷದ ಪ್ರಮುಖ ಮುಖಂಡರು ಭಾಗವಹಿಸಲಿದ್ದಾರೆ ಎಂದು ಜೆಡಿಎಸ್ ತಾಲೂಕು ಘಟಕದ ಅಧ್ಯಕ್ಷ ಬಸವರಾಜ ಅಪ್ಪಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**"ಶರಣ ಪರಂಪರೆ ನಾಶಗೊಳಿಸುವ ಹುನ್ನಾರ": ಕನ್ಹೇರಿ ಮಠದ ಸ್ವಾಮೀಜಿಗೆ ಜಿಲ್ಲೆ ಪ್ರವೇಶ ನಿರ್ಬಂಧಕ್ಕೆ ಪ್ರಗತಿಪರ ಸಂಘಟನೆಗಳ ಒತ್ತಾಯ**

# 'ಹಿಂದೂ ಸಮಾವೇಶ'ಕ್ಕೆ ತೀವ್ರ ಪ್ರತಿರೋಧ

■ವಿಜಯಸಾಕ್ಷಿ ಸುದ್ದಿ, ಗದಗ

"ಕೋಮುದ್ವೇಷ ಬಿತ್ತುವ ಕನ್ಹೇರಿ ಮಠದ ಕಾಡಸಿದ್ದೇಶ್ವರ ಸ್ವಾಮೀಜಿ ನೇತೃತ್ವದಲ್ಲಿ ಇದೇ ತಿಂಗಳ 31ರಂದು ನಗರದಲ್ಲಿ ಆಯೋಜಿಸಿರುವ 'ಹಿಂದೂ ಸಮಾವೇಶ'ವು ಬಸವಾದಿ ಶರಣ ಪರಂಪರೆಯನ್ನು ನಾಶಗೊಳಿಸುವ ಹುನ್ನಾರವಾಗಿದೆ" ಎಂದು ಆರೋಪಿಸಿ, ಸಮಾನ ಮನಸ್ಕರು, ಬಸವಾದಿ ಶರಣರು ಹಾಗೂ ವಿವಿಧ ಪ್ರಗತಿಪರ ಸಂಘಟನೆಗಳ ಮುಖಂಡರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಪ್ರವಾಸಿ ಮಂದಿರದ ಸಭಾಭವನದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿದ್ದ ಮುಖಂಡರು, "ಹಿಂದೂ ಸಮಾವೇಶ"ಕ್ಕೆ ಸಂಘಟಿತ ಪ್ರತಿರೋಧ ವ್ಯಕ್ತಪಡಿಸುವ ನಿರ್ಧಾರ ಕೈಗೊಂಡರು.

ಜಾಗತಿಕ ಲಿಂಗಾಯತ ಮಹಾಸಭಾ ಮುಖಂಡ ಅಶೋಕ ಬರಗುಂಡಿ ಮಾತನಾಡಿ, "ಸಮತೆಯ ಬದುಕು ಕಟ್ಟಿಕೊಟ್ಟ ಶರಣರು ಇಷ್ಟಲಿಂಗದಲ್ಲಿ ಬೆರೆತು ಎಲ್ಲರೂ ಒಂದೇ ಎನ್ನುವ ಭಾವದಲ್ಲಿ ಬದುಕಿದರು. ಇದನ್ನು ಸಹಿಸದ ಮನುವಾದಿಗಳು ಹಾಗೂ ವೈದಿಕ ಮನಸ್ಥಿತಿಯವರು ಶರಣ ಪರಂಪರೆಯನ್ನು ನಾಶ ಮಾಡಲು ಪ್ರಯತ್ನಿಸುತ್ತಿದ್ದಾರೆ. ಗದಗದಲ್ಲಿ ಹಿಂದೂ ಸಮಾವೇಶ ನಡೆಸುವ ಮೂಲಕ ಬಸವಣ್ಣನವರ



ವಿಚಾರಧಾರೆಗೆ ನುಗ್ಗುವ ಯತ್ನ ನಡೆಯುತ್ತಿದೆ. ಇದನ್ನು ನಾವೆಲ್ಲರೂ ಖಂಡಿಸಬೇಕು" ಎಂದು ಹೇಳಿದರು.

"ಗದಗದಲ್ಲಿ ಪ್ರತಿರೋಧ ವ್ಯಕ್ತವಾಗುವುದಿಲ್ಲವೆಂದು ಭಾವಿಸಿ ಆರ್‌ಎಸ್‌ಎಸ್ ಹಾಗೂ ಮನುವಾದಿ ಶಕ್ತಿಗಳು ಸಮಾವೇಶ ಹಮ್ಮಿಕೊಂಡಿವೆ. ಇದಕ್ಕೆ ಜಿಲ್ಲೆಯಲ್ಲಿ ದೊಡ್ಡ ಮಟ್ಟದ ಪ್ರತಿರೋಧ ವ್ಯಕ್ತವಾಗಬೇಕು" ಎಂದು ಅವರು ಕರೆ ನೀಡಿದರು.

ದಲಿತ ಹೋರಾಟಗಾರ ಶರೀಫ್ ಬಿಳೆಯಲಿ ಮಾತನಾಡಿ, "ಒಂದು ವರ್ಷದ ಹಿಂದೆ ಆರ್‌ಎಸ್‌ಎಸ್

> " ತೋಂಟದಾರ್ಯ ಮಠದ ಜಾತ್ರಾ ಸಮಿತಿಯ ಅಧ್ಯಕ್ಷರೇ ಈ ಹಿಂದೂ ಸಮಾವೇಶದಲ್ಲಿ ಭಾಗವಹಿಸುತ್ತಿದ್ದಾರೆ ಎಂದರೆ, ಆ ಮಠದ ಆಯ್ಕೆಗಳ ಬಗ್ಗೆ ಯೋಚನೆ ಮಾಡಬೇಕಿದೆ. ಇದು ಆರೋಪದ ಭಾಷೆಯಲ್ಲ, ಒಳಸಂಕಟದಿಂದ ಹೇಳುತ್ತಿರುವ ಮಾತು. ನಡೆಯಲಿರುವ ಹಿಂದೂ ಸಮಾವೇಶವನ್ನು ನಾವೆಲ್ಲರೂ ಪ್ರತಿಭಟಿಸಬೇಕಿದೆ"
>
> – **ಬಸವರಾಜ ಸೂಳಿಬಾವಿ**, ಬಂಡಾಯ ಸಾಹಿತಿ

### ಪೂರ್ವಭಾವಿ ಸಭೆಯ ಪ್ರಮುಖ ತೀರ್ಮಾನಗಳು

1. ನಿಜ ಶರಣರ ಸಮಾವೇಶ ಆಯೋಜಿಸಿ ವಚನ ಚಳುವಳಿಯನ್ನು ಮನೆಮನೆಗೂ ತಲುಪಿಸುವುದು
2. ಕೋಮುದ್ವೇಷ ಬಿತ್ತುತ್ತಿದ್ದಾರೆ ಎನ್ನಲಾದ ಕನ್ಹೇರಿ ಮಠದ ಸ್ವಾಮೀಜಿಗೆ ಗದಗ ಜಿಲ್ಲೆ ಪ್ರವೇಶ ನಿರ್ಬಂಧಿಸಲು ಆಗ್ರಹಿಸುವುದು
3. ಜಿಲ್ಲೆಯಾದ್ಯಂತ ಜಾಗೃತಿ ಅಭಿಯಾನ ನಡೆಸುವುದು
4. ಹಿಂದೂ ಸಮಾವೇಶಕ್ಕೆ ಸಂಘಟಿತ ರೀತಿಯಲ್ಲಿ ಪ್ರತಿರೋಧ ವ್ಯಕ್ತಪಡಿಸುವುದು

ಹಾಗೂ ಹಿಂದೂ ಸಂಘಟನೆಗಳು ಮಹಾಯಜ್ಞ, ಕುಂಭಮೇಳ ನಡೆಸಿದ್ದವು. ಈಗ ಶರಣರ ಹೆಸರಿನಲ್ಲಿ ಹಿಂದೂ ಸಮಾವೇಶ ನಡೆಸಲು ಮುಂದಾಗಿವೆ.

▶▶ 4ನೇ ಪುಟಕ್ಕೆ

**ಮನೆಮನೆಗೂ ನಾಲ್ಕು ವಿಭಾಗದ ಕಸ ವಿಂಗಡಣೆ ಕಡ್ಡಾಯ– ನಿಯಮ ಉಲ್ಲಂಘಿಸಿದವರ ವಿರುದ್ಧ ಕಠಿಣ ಕ್ರಮಕ್ಕೆ ಡಿಸಿ ಶ್ರೀಧರ್ ಎಚ್ಚರಿಕೆ**

# "ಇನ್ನು ಕಸಕ್ಕೂ ಕಾನೂನಿನ ಕಟ್ಟುಪಾಡು!"

■ವಿಜಯಸಾಕ್ಷಿ ಸುದ್ದಿ, ಗದಗ

"ಪರಿಸರ ಸಂರಕ್ಷಣೆ ಹಾಗೂ ನಗರಗಳ ಸ್ವಚ್ಛತೆಗಾಗಿ ಹೊಸ ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2026ನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು. ನಿಯಮ ಪಾಲಿಸದವರ ವಿರುದ್ಧ ಕ್ರಮ ಕೈಗೊಳ್ಳಲು ಅಧಿಕಾರಿಗಳು ಹಿಂದೇಟು ಹಾಕಬಾರದು" ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಎಚ್ಚರಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಘನ ತ್ಯಾಜ್ಯ ನಿರ್ವಹಣಾ



ನಿಯಮಗಳು–2026ರ ಅನುಷ್ಠಾನ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಹೊಸ ನಿಯಮಗಳ ಅನ್ವಯ ಸಾರ್ವಜನಿಕರು, ಮನೆಮಠಗಳು ಹಾಗೂ ವ್ಯಾಪಾರೋದ್ಯಮಿಗಳು ತಮ್ಮ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಕಸವನ್ನು ಕಡ್ಡಾಯವಾಗಿ ನಾಲ್ಕು ವಿಭಾಗಗಳಾಗಿ ವಿಂಗಡಿಸಿ ನಗರಸಭೆಯ ಕಸ ಸಂಗ್ರಹ ವಾಹನಗಳಿಗೆ ನೀಡಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಬೃಹತ್ ಕಸ ಉತ್ಪಾದಕರನ್ನು (Bulk Waste Generators) ಗುರುತಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

> "ಹಸಿ ತ್ಯಾಜ್ಯ, ಒಣ ತ್ಯಾಜ್ಯ, ಸ್ಯಾನಿಟರಿ ತ್ಯಾಜ್ಯ ಹಾಗೂ ವಿಶೇಷ ಕಾಳಜಿ ತ್ಯಾಜ್ಯ ಎಂದು ಕಸವನ್ನು ಪ್ರತ್ಯೇಕಿಸುವುದು ಕಡ್ಡಾಯ. ಪರಿಸರ ರಕ್ಷಣೆಗಾಗಿ ಪ್ರತಿಯೊಬ್ಬರೂ ಸಹಕಾರ ನೀಡಬೇಕು"
>
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ


### ಯಾವ ಕಸ ಯಾವ ವಿಭಾಗಕ್ಕೆ..?

1. **ಹಸಿ ತ್ಯಾಜ್ಯ:** ಅಡುಗೆ ಮನೆಯ ತ್ಯಾಜ್ಯ, ತರಕಾರಿ, ಹಣ್ಣು, ಹೂವು, ಮಾಂಸದ ತ್ಯಾಜ್ಯ ಹಾಗೂ ಕೊಳೆಯುವ ವಸ್ತುಗಳು
2. **ಒಣ ತ್ಯಾಜ್ಯ:** ಪ್ಲಾಸ್ಟಿಕ್, ಬಟ್ಟೆ, ಕಬ್ಬಿಣ, ರಬ್ಬರ್, ಮರದ ವಸ್ತುಗಳು
3. **ಸ್ಯಾನಿಟರಿ ತ್ಯಾಜ್ಯ:** ಡೈಪರ್, ಸ್ಯಾನಿಟರಿ ನ್ಯಾಪ್ಕಿನ್‌ಗಳು
4. **ವಿಶೇಷ ಕಾಳಜಿ ತ್ಯಾಜ್ಯ:** ಪೇಂಟ್ ಡಬ್ಬಿಗಳು, ಔಷಧ ಬಾಟಲಿಗಳು, ಇ–ವೇಸ್ಟ್, ಬಲ್ಬ್, ಹಳೆಯ ಬ್ಯಾಟರಿ, ಬಳಸಿದ ಸಿರಿಂಜ್, ಬ್ಯಾಂಡೇಜ್‌ಗಳು

▶▶ 4ನೇ ಪುಟಕ್ಕೆ

**ಸರ್ಕಾರದ ಮಾರ್ಗಸೂಚಿ ಕಡ್ಡಾಯ ಪಾಲನೆಗೆ ಪೊಲೀಸ್ ಇನ್ಸ್‌ಪೆಕ್ಟರ್ ಸುಬ್ಬಾಪೂರಮಠ ಕರೆ**

## ಶಾಂತಿ–ಸೌಹಾರ್ದತೆಯಿಂದ ಬಕ್ರೀದ್ ಆಚರಿಸಿ




■ವಿಜಯಸಾಕ್ಷಿ ಸುದ್ದಿ, ಮುಳಗುಂದ

ತ್ಯಾಗ ಮತ್ತು ಬಲಿದಾನದ ಸಂಕೇತವಾಗಿರುವ ಬಕ್ರೀದ್ ಹಬ್ಬವನ್ನು ಶಾಂತಿ ಹಾಗೂ ಸೌಹಾರ್ದತೆಯಿಂದ ಆಚರಿಸುವುದರ ಜೊತೆಗೆ ಸರ್ಕಾರದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಪೊಲೀಸ್ ಇನ್ಸ್‌ಪೆಕ್ಟರ್ ಬಿ.ಜಿ. ಸುಬ್ಬಾಪೂರಮಠ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಬಕ್ರೀದ್ ಹಬ್ಬದ ನಿಮಿತ್ತ ಆಯೋಜಿಸಿದ್ದ ಶಾಂತಿ ಸಭೆಯಲ್ಲಿ ಮಾತನಾಡಿದ ಅವರು, "ಮುಳಗುಂದ ಪಟ್ಟಣವು ಶಾಂತಿ ಮತ್ತು ಸೌಹಾರ್ದತೆಗೆ ಹೆಸರಾಗಿದ್ದು, ಇಲ್ಲಿ ಹಿಂದೂ–ಮುಸ್ಲಿಂ ಬಾಂಧವರು ಎಲ್ಲಾ ಹಬ್ಬ ಹರಿದಿನಗಳನ್ನು ಪರಸ್ಪರ ಸಹಕಾರದಿಂದ ಆಚರಿಸುತ್ತಿದ್ದಾರೆ" ಎಂದು ಹೇಳಿದರು.

"ಗೋವುಗಳ ಹತ್ಯೆ ಅಥವಾ ಅಕ್ರಮ ಸಾಗಾಟ ಕಂಡು ಬಂದಲ್ಲಿ ಕಾನೂನಿನ ಚೌಕಟ್ಟಿನಲ್ಲಿ ಅಪರಾಧ ಪ್ರಕರಣ ದಾಖಲಾಗುತ್ತದೆ. ತಪ್ಪಿತಸ್ಥರು ಶಿಕ್ಷೆಗೆ ಗುರಿಯಾಗುತ್ತಾರೆ. ಆದ್ದರಿಂದ ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಸುವುದರ ಜೊತೆಗೆ ಹಬ್ಬವನ್ನು ಶಾಂತಿಯುತವಾಗಿ ಆಚರಿಸಬೇಕು" ಎಂದು ಎಚ್ಚರಿಕೆ ನೀಡಿದರು.

ಸಭೆಯಲ್ಲಿ ಪಿಎಸ್‌ಐ ಡಿ.ಎಂ. ಮುಲ್ಲಾ, ಸುಧಾ ಹಲಕಿ, ಮುಖಂಡರಾದ ಎ.ಡಿ. ಮುಜಾವಾರ, ದಾವಲಸಾಬ ಲಕ್ಷ್ಮೇಶ್ವರ, ದಾವೂದ್ ಜಮಾಲಸಾಬನವರ, ಲಾಲಾಸಾಬಪೀರ ಮಕಾಂದಾರ, ಮುನ್ನಾ ಡಾಲಾಯತ, ಎಂ.ಎ. ನದ್ದಿಮುಲ್ಲಾ, ಇಸಾಕ್ ಹೊಸಮನಿ, ರಾಜೇಸಾಬ ಸೈಯದಬಡೆ, ಜಾಫರ್ ಭದ್ರಾಪೂರ, ಖಲಂದರ ಗಾಡಿ ಹಾಗೂ ರಮೇಶ್ ಮ್ಯಾಗೇರಿ ಉಪಸ್ಥಿತರಿದ್ದರು.

***ಜಿಲ್ಲೆಯಾದ್ಯಂತ ಮೆಡಿಕಲ್ ಸ್ಟೋರ್ ಬಂದ್ – ಔಷಧ ವ್ಯಾಪಾರಸ್ಥರ ಬೃಹತ್ ಬೈಕ್ ರ್‍ಯಾಲಿ**

# ಆನ್‌ಲೈನ್ ಔಷಧಿ ಮಾರಾಟಕ್ಕೆ ಬ್ರೇಕ್ ಹಾಕಿ!

■ವಿಜಯಸಾಕ್ಷಿ ಸುದ್ದಿ, ಗದಗ

ಕಾಮರ್ಸ್ ಹಾಗೂ ಆನ್‌ಲೈನ್ ಮೂಲಕ ಕಾನೂನುಬಾಹಿರವಾಗಿ ನಡೆಯುತ್ತಿರುವ ಔಷಧಿ ಮಾರಾಟವನ್ನು ಸಂಪೂರ್ಣ ನಿಷೇಧಿಸಬೇಕೆಂದು ಆಗ್ರಹಿಸಿ ಅಖಿಲ ಭಾರತ ಔಷಧ ವ್ಯಾಪಾರಸ್ಥರ ಸಂಘ ನೀಡಿದ್ದ ಬಂದ್ ಕರೆಗೆ ಜಿಲ್ಲೆಯಲ್ಲಿ ವ್ಯಾಪಕ ಬೆಂಬಲ ವ್ಯಕ್ತವಾಯಿತು.

ಬುಧವಾರ ಬೆಳಗ್ಗಿನಿಂದಲೇ ಜಿಲ್ಲೆಯಾದ್ಯಂತ ಔಷಧ ವ್ಯಾಪಾರಸ್ಥರು ತಮ್ಮ ಮೆಡಿಕಲ್ ಅಂಗಡಿಗಳನ್ನು ಬಂದ್ ಮಾಡಿ ಪ್ರತಿಭಟನೆಯಲ್ಲಿ ಭಾಗವಹಿಸಿದರು. ಆನ್‌ಲೈನ್ ಔಷಧಿ ಮಾರಾಟದಿಂದ ಸಾರ್ವಜನಿಕರ ಆರೋಗ್ಯಕ್ಕೆ ಅಪಾಯ ಎದುರಾಗಿದೆ ಎಂದು ಆರೋಪಿಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಗಾಂಧಿ ವೃತ್ತದಿಂದ ಆರಂಭವಾದ ಔಷಧ ವ್ಯಾಪಾರಸ್ಥರ ಬೃಹತ್ ಬೈಕ್ ರ್‍ಯಾಲಿ ಟಾಂಗಾಕೂಟ,




ಜೋಡಮಾರುತಿ ದೇವಸ್ಥಾನ ಸೇರಿದಂತೆ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಜಿಲ್ಲಾಡಳಿತ ಭವನ ತಲುಪಿತು. ಬಳಿಕ ಜಿಲ್ಲಾಧಿಕಾರಿಗಳ ಮೂಲಕ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯ ನೇತೃತ್ವ ವಹಿಸಿ ಮಾತನಾಡಿದ ಜಿಲ್ಲಾ ಔಷಧ ವ್ಯಾಪಾರಸ್ಥರ ಮುಖಂಡ ರಾಮನಗೌಡ ದಾನಪ್ಪಗೌಡ್ರ, ಇ–ಕಾಮರ್ಸ್ ಆನ್‌ಲೈನ್ ವ್ಯವಸ್ಥೆಯಲ್ಲಿ ಚೈನ್ ಸಿಸ್ಟಮ್ ದುರ್ಬಳಕೆಯಾಗುತ್ತಿದೆ ಎಂದು ಆರೋಪಿಸಿದರು. ಸಾರ್ವಜನಿಕರ ಆರೋಗ್ಯದೊಂದಿಗೆ ಚೆಲ್ಲಾಟವಾಡುತ್ತಿರುವ ಕೆಲವು ಆನ್‌ಲೈನ್ ಸಂಸ್ಥೆಗಳು ನಕಲಿ ಹಾಗೂ ಗುಣಮಟ್ಟವಿಲ್ಲದ ಔಷಧಿಗಳನ್ನು ರಾಜಾರೋಷವಾಗಿ ಮಾರಾಟ ಮಾಡುತ್ತಿವೆ. ನಾರ್ಕೋಟಿಕ್ಸ್ ಹಾಗೂ ಆಂಟಿಬಯೋಟಿಕ್ ಔಷಧಿಗಳನ್ನೂ ನಿರ್ಬಂಧವಿಲ್ಲದೇ ವಿತರಿಸಲಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಕೆಲವು ಆನ್‌ಲೈನ್ ಕಂಪನಿಗಳು ವೈದ್ಯರ ಅಧಿಕೃತ ಪ್ರಿಸ್ಕ್ರಿಪ್ಷನ್ ಇಲ್ಲದೇ ಔಷಧಿಗಳನ್ನು ರವಾನಿಸುತ್ತಿವೆ. ಇನ್ನೂ ಕೆಲವು ಕಡೆ ನಕಲಿ ವೈದ್ಯಕೀಯ ಚೀಟಿಗಳನ್ನು ಸೃಷ್ಟಿಸಿ ಔಷಧಿ ವಿತರಿಸಿರುವ ಪ್ರಕರಣಗಳೂ ಬೆಳಕಿಗೆ ಬಂದಿವೆ ಎಂದು ಹೇಳಿದರು.

ಪ್ರತಿಭಟನೆಯಲ್ಲಿ ಜ್ಞಾನೇಶ್ವರ್ ಖೋಕಲೆ, ಎಂ.ಡಿ. ಕಾಬಳ್ಳಿ, ಮಹದೇಗೌಡ ಲಿಂಗನಗೌಡ, ಸುರೇಶ ನಡುಗುಂದಿ, ರಂಜಾನ್ ಸಾಬ್ ನದಾಫ್, ಬರಡ್ಡಿ ಪಂಕಜ್ವಾರ್ಕರ್, ಜಾಫರ್ ಹೊಂಬಾಳ್, ಪುರುಷೋತ್ತಮ ಪುಣ್ಯ, ವಿಕ್ರಂ ಜೈನ್, ಸುರೇಂದ್ರ ಪತೇಪುರ್, ವಿನೋದ್ ಜೈನ್, ಉಮೇಶ್ ತುಪ್ಪದ, ಗಣೇಶ್ ಕಬಾಡಿ, ರಾಜಣ್ಣ ತ್ರಿಮಲೆ, ಭೀಮನಗೌಡ, ಶಪಿ ಕೊಪ್ಪಳ, ರಾಜು ಚೋಳಿ, ಅನಿಲ್ ಕುಣಿಕರ್, ಅನಿಲ್ ಬೂದಿಹಾಳ, ನಿವೃತ್ತಿನಾಥ್ ಖೋಕಲೆ, ಮಲ್ಲನಗೌಡ, ಸುರೇಶ ನಿಡಗುಂದಿ ಸೇರಿದಂತೆ ಜಿಲ್ಲೆಯ ನೂರಾರು ಮೆಡಿಕಲ್ ಹಾಗೂ ಫಾರ್ಮಾ ಸಂಸ್ಥೆಗಳ ಮಾಲೀಕರು ಹಾಗೂ ಪ್ರತಿನಿಧಿಗಳು ಭಾಗವಹಿಸಿದ್ದರು.

> "ಸಾರ್ವಜನಿಕರ ಪ್ರಾಣಕ್ಕೆ ಕುತ್ತು ತರುತ್ತಿರುವ ಈ ಇ–ಕಾಮರ್ಸ್ ಔಷಧಿ ವಿತರಣಾ ವ್ಯವಸ್ಥೆಯನ್ನು ಸರ್ಕಾರ ತಕ್ಷಣ ಶಾಶ್ವತವಾಗಿ ಬಂದ್ ಮಾಡಬೇಕು"
>
> – **ರಾಮನಗೌಡ ದಾನಪ್ಪಗೌಡ್ರ**

### ಜನೌಷಧಿ ಕೇಂದ್ರಗಳಿಂದ ಸೇವೆ ಮುಂದುವರಿಕೆ

ಜಿಲ್ಲಾದ್ಯಂತ ಖಾಸಗಿ ಮೆಡಿಕಲ್ ಸ್ಟೋರ್‌ಗಳು ಬಂದ್ ಆಗಿದ್ದರಿಂದ ಸಾರ್ವಜನಿಕರಿಗೆ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮವಾಗಿ ನಗರದ ಟಾಂಗಾಕೂಟ ಹಾಗೂ ಪೊಲೀಸ್ ಠಾಣೆ ಆವರಣದಲ್ಲಿರುವ ಪ್ರಧಾನ ಮಂತ್ರಿ ಜನೌಷಧಿ ಕೇಂದ್ರಗಳು ಎಂದಿನಂತೆ ಕಾರ್ಯನಿರ್ವಹಿಸಿ ಸಾರ್ವಜನಿಕರಿಗೆ ಸೇವೆ ನೀಡಿದವು.

# ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2026–27ನೇ ಸಾಲಿನ ಮೆಟ್ರಿಕ ಪೂರ್ವ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ.

ಗದಗ ಜಿಲ್ಲೆಯ ಮೆಟ್ರಿಕ ಪೂರ್ವ ಬಾಲಕ ಹಾಗೂ ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಪಡೆಯಲು ಇಚ್ಛಿಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ ಹಾಗೂ ಪ.ಜಾ./ಪ.ವರ್ಗದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಕೆ ಪ್ರಕ್ರಿಯೆ ಮೇ 20ರಿಂದ ಆರಂಭವಾಗಿದ್ದು, ಜೂನ್ 8 ಕೊನೆಯ ದಿನವಾಗಿರುತ್ತದೆ. ವಿದ್ಯಾರ್ಥಿಗಳು [ವಿದ್ಯಾರ್ಥಿ ನಿಲಯ ಅರ್ಜಿ ಪೋರ್ಟಲ್](https://shp.karnataka.gov.in/bcwd?utm_source=chatgpt.com) ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು.

ಪ್ರವರ್ಗ–1 ಹಾಗೂ ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ಮಿತಿ ₹2.50 ಲಕ್ಷ ನಿಗದಿಪಡಿಸಲಾಗಿದೆ. ಪ್ರವರ್ಗ–2ಎ, 2ಬಿ, 3ಎ, 3ಬಿ ಹಾಗೂ ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ಮಿತಿ ₹1 ಲಕ್ಷವಾಗಿರಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಅರ್ಜಿ ಸಲ್ಲಿಕೆಗೆ ಅಗತ್ಯ ದಾಖಲೆಗಳು ಹಾಗೂ ಸರ್ಕಾರದ ಆದೇಶಗಳ ವಿವರವನ್ನು [ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವೆಬ್‌ಸೈಟ್](https://bcwd.karnataka.gov.in?utm_source=chatgpt.com) ನಲ್ಲಿ ಪಡೆಯಬಹುದಾಗಿದೆ.

ಅರ್ಜಿ ಸಲ್ಲಿಕೆಯಲ್ಲಿ ತಾಂತ್ರಿಕ ತೊಂದರೆಗಳಾದಲ್ಲಿ ಛಭಿತಿಜ–ುಜಟಠಿಟುಟಿಜ@ರಟಚುಟ.ಛಿಂಟ ಇ–ಮೇಲ್ ಮೂಲಕ ಅಥವಾ ಸಂಬಂಧಿಸಿದ ಜಿಲ್ಲಾ ಹಾಗೂ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಎಂ.ಎಂ. ತುಂಬರಮಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 3ನೇ ರಾಷ್ಟ್ರೀಯ ಕಲ್ಪಿತ ನ್ಯಾಯಾಲಯ ಸ್ಪರ್ಧೆಗೆ ದೇಶದ 27 ತಂಡಗಳ ಆಗಮನ

# ನಾಳೆಯಿಂದ ರಾಷ್ಟ್ರಮಟ್ಟದ 'ಮೂಟ್ ಕೋರ್ಟ್' ಮಹಾಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರ ಮತ್ತೊಮ್ಮೆ ರಾಷ್ಟ್ರಮಟ್ಟದ ಕಾನೂನು ಚಟುವಟಿಕೆಗಳಿಗೆ ಸಾಕ್ಷಿಯಾಗಲಿದ್ದು, ಕೆ.ಎಲ್.ಇ. ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯ ವತಿಯಿಂದ ಮೇ 22ರಿಂದ 24ರವರೆಗೆ 3ನೇ ರಾಷ್ಟ್ರೀಯ ಕಲ್ಪಿತ ನ್ಯಾಯಾಲಯ ಸ್ಪರ್ಧೆ 2026 ಆಯೋಜಿಸಲಾಗಿದೆ. ದೇಶದ ವಿವಿಧ ರಾಜ್ಯಗಳಿಂದ 27 ಕಾನೂನು ವಿದ್ಯಾರ್ಥಿ ತಂಡಗಳು ಭಾಗವಹಿಸುತ್ತಿದ್ದು, ಮೂರು ದಿನಗಳ ಕಾಲ ಗದಗದಲ್ಲಿ ಕಾನೂನು ವಾದ–ಪ್ರತಿವಾದಗಳ ಸಿಡಿಲು ಮೊಳಗಲಿದೆ.

ಈ ಕುರಿತು ಕಾಲೇಜಿನ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಸಂಜೀವ ಎಂ . ಹುಲ್ಲೂರ ಮಾಹಿತಿ ನೀಡಿದರು.

ಈ ವರ್ಷದ ಸ್ಪರ್ಧೆ "ಹಿಂದೂ ಕಾನೂನಿನ ದಾಂಪತ್ಯ ಹಕ್ಕುಗಳ ಮರುಸ್ಥಾಪನೆ" ವಿಷಯವನ್ನು ಆಧರಿಸಿಕೊಂಡಿದ್ದು, ಕಾನೂನು ವಿದ್ಯಾರ್ಥಿಗಳಲ್ಲಿ ವಾದ ಮಂಡನೆ, ಕಾನೂನು ಸಂಶೋಧನೆ ಹಾಗೂ ನ್ಯಾಯಾಂಗ ಪ್ರಕ್ರಿಯೆಯ ಅರಿವು ಬೆಳೆಸುವ ಉದ್ದೇಶ ಹೊಂದಿದೆ. ರಾಷ್ಟ್ರಮಟ್ಟದ ಈ ಸ್ಪರ್ಧೆ ಯುವ ಕಾನೂನು ಪ್ರತಿಭೆಗಳಿಗೆ ತಮ್ಮ ಸಾಮರ್ಥ್ಯ ಪ್ರದರ್ಶಿಸಲು ಮಹತ್ವದ ವೇದಿಕೆಯಾಗಲಿದೆ ಎಂದರು.



ಮೇ 22ರಂದು ಸಂಜೆ 5 ಗಂಟೆಗೆ ಗದಗದ ಜೆ.ಟಿ. ಕಾಲೇಜು ಆವರಣದ ಸಭಾಂಗಣದಲ್ಲಿ ಉದ್ಘಾಟನಾ ಸಮಾರಂಭ ನಡೆಯಲಿದೆ. ಮಹಾತ್ಮ ಗಾಂಧೀ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿಗಳು (ಪ್ರ) ಹಾಗೂ ಕುಲಸಚಿವರಾದ ಪ್ರೊ. (ಡಾ.) ಸುರೇಶ ವಿ. ನಾಡಗೌಡ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದು ಡಾ.ಸಂಜೀವ ಎಂ. ಹುಲ್ಲೂರ ಹೇಳಿದರು.

ಕರ್ನಾಟಕ ಉಚ್ಚ ನ್ಯಾಯಾಲಯದ ವಕೀಲರಾದ ಡಾ. ಜಗದೀಶ ಎಸ್. ಹಾಲಶೆಟ್ಟಿ ಹಾಗೂ ಜೆ.ಟಿ. ಕಾಲೇಜಿನ ಪ್ರಾಚಾರ್ಯ ಪ್ರೊ. ಪಿ.ಜಿ. ಪಾಟೀಲ ಗೌರವ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದ ಸ್ಥಾನಿಕ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಎಸ್.ಎ. ಮಾನ್ವಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಸ್ಪರ್ಧೆಯಲ್ಲಿ ಪ್ರಾಥಮಿಕ ಸುತ್ತು, ಕ್ವಾರ್ಟರ್ ಫೈನಲ್, ಸೆಮಿ ಫೈನಲ್ ಹಾಗೂ ಅಂತಿಮ ಸುತ್ತುಗಳು ನಡೆಯಲಿವೆ.

ಮೇ 24ರಂದು ಮಧ್ಯಾಹ್ನ 3 ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದ್ದು, ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶ ಬಿ.ಎ. ಪಾಟೀಲ ಸಮಾರೋಪ ಭಾಷಣ ಮಾಡಲಿದ್ದಾರೆ.

ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿ ಉಮೇಶ ಮಂಜುನಾಥ ಭಟ್ ಅಡಿಗ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು, ಜಿಲ್ಲಾ ಗ್ರಾಹಕ ವ್ಯಾಜ್ಯ ಪರಿಹಾರ ಆಯೋಗದ ಅಧ್ಯಕ್ಷ ಎಂ.ಐ. ಶಿಗ್ಲಿ ಗೌರವಾನ್ವಿತ ಅತಿಥಿಯಾಗಿ ಭಾಗವಹಿಸಲಿದ್ದಾರೆ.

ಕೆ.ಎಲ್.ಇ. ಕಾನೂನು ಮಹಾವಿದ್ಯಾಲಯ, ಬೆಂಗಳೂರಿನ ಪ್ರಾಚಾರ್ಯ ಹಾಗೂ ಕಾನೂನು ಅಕಾಡೆಮಿ ನಿರ್ದೇಶಕ ಡಾ. ಜೆ.ಎಂ. ಮಲ್ಲಿಕಾರ್ಜುನಯ್ಯ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಸ್ಥಾನಿಕ ಆಡಳಿತ ಮಂಡಳಿ ಸದಸ್ಯರಾದ ಬಿ.ಜಿ. ಶೆಲ್ಲಿಕೇರಿ ಮತ್ತು ಎಸ್.ಎಫ್. ಹಾದಿಮನಿ ಉಪಸ್ಥಿತರಿರುವರು ಎಂದು ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಸಂಜೀವ ಎಂ. ಹುಲ್ಲೂರ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಎಸ್.ಎ. ಮಾನ್ವಿ, ಎಸ್.ಎಫ್. ಹಾದಿಮನಿ, ಬಿ.ಜಿ. ಶೆಲ್ಲಿಕೇರಿ, ಪಿ.ಜಿ. ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಇಂದು ಕಲ್ಮೇಶ್ವರ ಕಾಲೇಜಿನಲ್ಲಿ ಕ್ಯಾಂಪಸ್ ಸಂದರ್ಶನ



■ವಿಜಯಸಾಕ್ಷಿ ಸುದ್ದಿ, ಹೊಳೆ ಆಲೂರು

ಗ್ರಾಮೀಣ ಭಾಗದ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ರೋಣ ತಾಲೂಕಿನ ಹೊಳೆಆಲೂರಿನ ಕವಿಪ್ರ ಸಮಿತಿಯ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಪದವಿ ಮಹಾವಿದ್ಯಾಲಯದಲ್ಲಿ ಮೇ 21ರಂದು ಬೃಹತ್ ಕ್ಯಾಂಪಸ್ ಸಂದರ್ಶನ ಆಯೋಜಿಸಲಾಗಿದೆ.

ಬೆಳಿಗ್ಗೆ 10 ಗಂಟೆಗೆ ಕಾಲೇಜಿನ ಆವರಣದಲ್ಲಿ ನಡೆಯುವ ಸಂದರ್ಶನದಲ್ಲಿ ಟಾಟಾ ಎಲೆಕ್ಟ್ರಾನಿಕ್ಸ್, ಮೋಟಾರ್ಸ್, ಇಂಡೋ ಮಿಮ್, ಮದರಸನ್ ಸೇರಿದಂತೆ ಖ್ಯಾತ ಕೈಗಾರಿಕಾ ಸಂಸ್ಥೆಗಳು ನೇರ ನೇಮಕಾತಿ ಪ್ರಕ್ರಿಯೆ ನಡೆಸಲಿವೆ. ಎಸ್‌ಎಸ್‌ಎಲ್‌ಸಿ, ಪಿಯುಸಿ, ಡಿಪ್ಲೊಮಾ ಹಾಗೂ ಯಾವುದೇ ಪದವಿ ಪಡೆದ 18ರಿಂದ 26 ವರ್ಷದೊಳಗಿನ ಯುವಕ–ಯುವತಿಯರು ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ.

ಅಭ್ಯರ್ಥಿಗಳು ತಮ್ಮ ಅಂಕಪಟ್ಟಿ, ಆಧಾರ್ ಕಾರ್ಡ್, ಪಾನ್ ಕಾರ್ಡ್ ಹಾಗೂ ಪಾಸ್‌ಪೋರ್ಟ್ ಗಾತ್ರದ ಎರಡು ಭಾವಚಿತ್ರಗಳೊಂದಿಗೆ ಅಗತ್ಯ ದಾಖಲೆಗಳ ನಾಲ್ಕು ಸೆಟ್‌ಗಳನ್ನು ತರಬೇಕೆಂದು ಸೂಚಿಸಲಾಗಿದೆ. ಸ್ಥಳದಲ್ಲೇ ಅರ್ಜಿ ಸಲ್ಲಿಸಲು ವ್ಯವಸ್ಥೆ ಮಾಡಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾರ್ಯ ಡಾ. ಎಸ್.ಬಿ. ಸಜ್ಜನರ ವಹಿಸಲಿದ್ದು, ಸಂಸ್ಥೆಯ ಅಧ್ಯಕ್ಷ ಬಿ.ಸಿ. ಪಾಟೀಲ ಸೇರಿದಂತೆ ವಿವಿಧ ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಆಯೋಜಕರಾದ ಡಾ. ಕುಮಾರ ವೈ. ಹಂಜಗಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9353338277 ಹಾಗೂ 9632966801 ಸಂಪರ್ಕಿಸಬಹುದು.

### ವರ್ತಮಾನದ ಸಂಕಟಗಳಿಗೆ ಕಾವ್ಯದ ಮೂಲಕವೇ ಪರಿಹಾರ ಸಾಧ್ಯ: ಮಂಜುಳಾ ವೆಂಕಟೇಶಯ್ಯ

# ತಲ್ಲಣಗಳ ಕಾಲಕ್ಕೆ ತತ್ವದ ಕಾವ್ಯ ಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದ ವರ್ತಮಾನದ ತಲ್ಲಣಗಳು, ಭವಿಷ್ಯದ ಆತಂಕಗಳು ಹಾಗೂ ಮೌಲ್ಯಗಳ ಕುಸಿತದ ನಡುವೆ ಮಾನವೀಯತೆಯ ದಾರಿದೀಪವಾಗುವ ಕಾವ್ಯ ಇಂದು ಅತ್ಯಗತ್ಯವಾಗಿದೆ ಎಂದು ಕವಯಿತ್ರಿ ಮಂಜುಳಾ ವೆಂಕಟೇಶಯ್ಯ ಅಭಿಪ್ರಾಯಪಟ್ಟರು.

ನಗರದಲ್ಲಿ ನಡೆದ ಯುವ ಸಾಹಿತ್ಯ ಸಮಾವೇಶದ ಅಂಗವಾಗಿ ಆಯೋಜಿಸಿದ್ದ ಯುವ ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇಂದಿನ ಕಾವ್ಯ ಕೇವಲ ಭಾವನೆಗಳ ಅಭಿವ್ಯಕ್ತಿಯಾಗದೆ ಸಮಾಜದ ಸಂಕಟಗಳಿಗೆ ಸ್ಪಂದಿಸುವ ಜೀವವಾಹಿನಿಯಾಗಬೇಕು ಎಂದು ಹೇಳಿದರು.

ಇಂದಿನ ಯುವಪೀಳಿಗೆಯ ದಿಕ್ಕುತೋಚದ ಸ್ಥಿತಿಯ ಬಗ್ಗೆ ಆತಂಕ ವ್ಯಕ್ತಪಡಿಸಿದ ಅವರು, "ರಾಷ್ಟ್ರಧ್ವಜದ ಬಣ್ಣಗಳೇ ಕೆಲ ಮತಾಂಧರ ಕಣ್ಣು ಕುಕ್ಕಿಸುತ್ತಿವೆ. ತತ್ವ ಸಿದ್ಧಾಂತಗಳಿಲ್ಲದೆ ಯುವಜನತೆ ದಾರಿ ತಪ್ಪುತ್ತಿದೆ" ಎಂದು ವಿಷಾದಿಸಿದರು.




ಯುವ ಕವಿಗೋಷ್ಠಿಯಲ್ಲಿ ವಿವಿಧ ಸಾಮಾಜಿಕ, ಸಾಂಸ್ಕೃತಿಕ ಹಾಗೂ ಮಾನವೀಯ ಮೌಲ್ಯಗಳನ್ನು ಪ್ರತಿಬಿಂಬಿಸುವ ಕವಿತೆಗಳು ಗಮನ ಸೆಳೆದವು. ಗಣೇಶ್ ಪಾಟೀಲ್ ಅವರ 'ಸೂಜಿ ಕಣ್ಣಿನ ವ್ಯಥೆ', ಸೌಮ್ಯ ಹಿರೇಮಠ ಅವರ 'ಹೇಳಿಲ್ಲಂದಿರಿ ಕೇಳಿಲ್ಲಂದಿರಿ', ಚೇತನ ಗಡಗಿ ಅವರ 'ಸಾಮರಸ್ಯ', ಶರಣು ಪೊಲೀಸ್ ಪಾಟೀಲ್ ಅವರ ಜಾತಿ ವ್ಯವಸ್ಥೆ ಕುರಿತ ಕವನಗಳು ಸಭಿಕರ ಮನಮುಟ್ಟಿದವು.

> "ಕಾವ್ಯ ಕರುಣಾಮಯಿ ಮಾನವೀಯತೆಯ ಧ್ವನಿಯಾಗಬೇಕು. ವರ್ತಮಾನದ ತಲ್ಲಣಗಳಿಗೆ ಪರಿಹಾರ ತೋರಿಸುವ ಶಕ್ತಿ ಕವಿತೆಗೆ ಇದೆ"
> – **ಮಂಜುಳಾ ವೆಂಕಟೇಶಯ್ಯ**, ಕವಯಿತ್ರಿ

ಲಕ್ಷ್ಮೀಬಾಯಿ ಆರೇರ ಅವರ 'ಪ್ರಕೃತಿ', ವರ್ಷಾ ಕುಲಕರ್ಣಿ ಅವರ 'ಜೀವನದ ಪರಮ ಸತ್ಯ', ಬೂದೇಶ ಮಜ್ಜಿಗುಡ್ಡ ಅವರ ನಾಡು–ನುಡಿ ಕುರಿತ ವರ್ಣನೆ, ಸೌಜನ್ಯ ಪಾಟೀಲರ ಪ್ರೀತಿಯ ವಿವಿಧ ಆಯಾಮಗಳ ಅನಾವರಣ ಹಾಗೂ ರಂಜಿತಾ ಕಡಿ ಅವರ 'ನೀ ಕೊಡಿಸಿದ ಮಲ್ಲಿಗೆ' ಕವನಗಳು ಕವಿಗೋಷ್ಠಿಗೆ ಮತ್ತಷ್ಟು ಕಂಗೊಳಿಸಿದವು.

ವಿಜಯಲಕ್ಷ್ಮಿ ಬಂಡಿವಾಡ ಅವರ 'ನಾದ' ಮತ್ತು ಮಹಾಂತೇಶ ಬೇರಗಣ್ಣವರ ಕವಿತೆಗಳು ಪ್ರಚಲಿತ ಸಾಮಾಜಿಕ ಸಂದರ್ಭಗಳಿಗೆ ಹಿಡಿದ ಕನ್ನಡಿಯಂತಿದ್ದು ವಿಶೇಷ ಮೆಚ್ಚುಗೆಗೆ ಪಾತ್ರವಾದವು.

ಕಾರ್ಯಕ್ರಮದಲ್ಲಿ ವಿವೇಕಾನಂದಗೌಡ ಪಾಟೀಲ, ಬಾಹುಬಲಿ ಜೈನರ್, ಡಿ.ಎಸ್. ಬಾಪುರಿ, ಸತೀಶ ಚನ್ನಪ್ಪಗೌಡರ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಸಿಂಚನಾ ಶಟವಾಜಿ ಕಾರ್ಯಕ್ರಮ ನಿರೂಪಿಸಿದರು. ಡಿ.ಎಸ್. ನಾಯ್ಕ ಸ್ವಾಗತಿಸಿದರು. ಅಮರೇಶ ರಾಂಪೂರ ವಂದಿಸಿದರು. ಸಾಹಿತಿಗಳು, ವಿದ್ಯಾರ್ಥಿಗಳು ಹಾಗೂ ಸಾಹಿತ್ಯಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

### ಡೆಂಗ್ಯೂ ನಿಯಂತ್ರಣಕ್ಕೆ ಸಮುದಾಯದ ಸಹಭಾಗಿತ್ವ ಅಗತ್ಯ – ಶಿಗ್ಲಿಯಲ್ಲಿ ಜಾಗೃತಿ ಕಾರ್ಯಕ್ರಮ

# ಸ್ವಚ್ಛ ಪರಿಸರದಿಂದ ಡೆಂಗ್ಯೂಗೆ ಕಡಿವಾಣ..!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಡೆಂಗ್ಯೂ ನಿಯಂತ್ರಣಕ್ಕೆ ಆರೋಗ್ಯ ಇಲಾಖೆಯೊಂದಿಗೆ ಸಾರ್ವಜನಿಕರೂ ಕೈಜೋಡಿಸುವುದು ಅಗತ್ಯ ಎಂದು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಫ್.ಸಿ. ಹೊಸಮಠ ಹೇಳಿದರು.

ತಾಲೂಕಿನ ಶಿಗ್ಲಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸೋಮವಾರ ಆರೋಗ್ಯ ಶಿಕ್ಷಣ ಕಾರ್ಯಕ್ರಮದಡಿ ಹಮ್ಮಿಕೊಂಡಿದ್ದ "ಡೆಂಗ್ಯೂ ನಿಯಂತ್ರಣದಲ್ಲಿ ಸಮುದಾಯದ ಸಹಭಾಗಿತ್ವ" ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಡೆಂಗ್ಯೂ ಹರಡುವ ಕಾರಣಗಳು, ಮುನ್ನೆಚ್ಚರಿಕಾ ಕ್ರಮಗಳು ಹಾಗೂ ಸ್ವಚ್ಛತೆಯ ಮಹತ್ವದ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು.



ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಹಳೆಯ ಟೈರುಗಳು, ತೆಂಗಿನ ಚಿಪ್ಪುಗಳು, ಪ್ಲಾಸ್ಟಿಕ್ ಪಾತ್ರೆಗಳು ಸೇರಿದಂತೆ ನೀರು ಸೇರುವ ವಸ್ತುಗಳನ್ನು ತೆರವುಗೊಳಿಸಬೇಕು. ಇದರಿಂದ ಸೊಳ್ಳೆಗಳ ಉತ್ಪತ್ತಿಗೆ ಅವಕಾಶ ಇರುವುದಿಲ್ಲ ಎಂದು ತಿಳಿಸಿದರು.

ಮಳೆಗಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ಡೆಂಗ್ಯೂ ಜ್ವರ ಹರಡುವ ಎಡಿಸ್ ಸೊಳ್ಳೆಗಳನ್ನು ನಿಯಂತ್ರಿಸಲು ಪ್ರತಿಯೊಬ್ಬರೂ ತಮ್ಮ ಮನೆಯ ಪರಿಸರವನ್ನು ಸ್ವಚ್ಛವಾಗಿಡುವುದು ಅಗತ್ಯವೆಂದರು.

> "ಮನೆಯ ಸುತ್ತ ನೀರು ನಿಲ್ಲದಂತೆ ನೋಡಿಕೊಂಡರೆ ಡೆಂಗ್ಯೂ ನಿಯಂತ್ರಣ ಸುಲಭ."
> – **ಎಫ್.ಸಿ. ಹೊಸಮಠ,** ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ

ಆರೋಗ್ಯ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರು ಮನೆಮನೆಗೆ ತೆರಳಿ ಜಾಗೃತಿ ಮೂಡಿಸುತ್ತಿದ್ದು, ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಸಹಕರಿಸಿ ಡೆಂಗ್ಯೂ ನಿಯಂತ್ರಣಕ್ಕೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿಗಳಾದ ಇ.ಜಿ. ಬದಿ, ಜಿ.ಎಚ್. ಬಿದನೂರಮಠ, ಎಸ್.ಎಸ್. ಪಪ್ಪಿ, ಅಬ್ದುಲ್ ಬೂದಿಹಾಳ, ಶೋಭಾ ಮಹೇಂದ್ರಕರ, ಆಶಾ ಕಾರ್ಯಕರ್ತೆಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಜಿ.ಬಿ. ಬಣಗಾರ ಹಾಗೂ ಆರ್.ಕೆ. ಪುತಳೀಕರ ಕಾರ್ಯಕ್ರಮ ನಿರೂಪಿಸಿದರು.

# ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಅರ್ಜಿ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಿ.ಆರ್. ಅಂಬೇಡ್ಕರ್ ದಲಿತ ಸಂಘರ್ಷ ಸಮಿತಿ ಜಿಲ್ಲಾ ಘಟಕದ ವತಿಯಿಂದ 2026–27ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.70 ಅಂಕ ಪಡೆದ ಗದಗ ಜಿಲ್ಲೆಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗಾಗಿ ನೀಡಲಾಗುತ್ತಿರುವ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಸಲ್ಲಿಸುವ ಅವಧಿಯನ್ನು ವಿಸ್ತರಿಸಲಾಗಿದೆ.

ಈ ಮೊದಲು ಮೇ 20ರಂದು ಕೊನೆಗೊಳ್ಳಬೇಕಿದ್ದ ಅರ್ಜಿ ಸಲ್ಲಿಕೆ ಪ್ರಕ್ರಿಯೆಯನ್ನು, ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುತ್ತಿರುವ ಹಿನ್ನೆಲೆಯಲ್ಲಿ ಮೇ 25, 2026ರವರೆಗೆ ವಿಸ್ತರಿಸಲಾಗಿದೆ ಎಂದು ಸಮಿತಿಯ ಜಿಲ್ಲಾ ಅಧ್ಯಕ್ಷ ಶಿವಾನಂದ ತಮ್ಮಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಶಿರಸಂಗಿ ಮೊಬೈಲ್ಸ್, ಮಳಿಗೆ ನಂ.5, ಗಾನಯೋಗಿ ಪಂಡಿತ ಪುಟ್ಟರಾಜ ಬಸ್ ನಿಲ್ದಾಣ (ಹಳೆ ಬಸ್ ನಿಲ್ದಾಣ), ಗದಗ ಇಲ್ಲಿ ಅರ್ಜಿ ನಮೂನೆ ಪಡೆದುಕೊಳ್ಳಬಹುದು.

ಅರ್ಜಿಯೊಂದಿಗೆ ಜಾತಿ ಪ್ರಮಾಣ ಪತ್ರ, ಅಂಕಪಟ್ಟಿ ಹಾಗೂ ಎರಡು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳನ್ನು ಲಗತ್ತಿಸಿ ಸಲ್ಲಿಸಬೇಕು.

ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಕುರಿತು ಪತ್ರಿಕಾ ಪ್ರಕಟಣೆ ಹಾಗೂ ದೂರವಾಣಿ ಮೂಲಕ ಮಾಹಿತಿ ನೀಡಲಾಗುವುದು ಎಂದು ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 8073909262, 7619454583, 8951537019 ಹಾಗೂ 8746014115 ಸಂಪರ್ಕಿಸಬಹುದು.

### ಜಗದೀಶ್ ಶೆಟ್ಟರ್ ಚಾಲನೆ; ವಿಜಯ ರಾಘವೇಂದ್ರಗೆ 'ನ್ಯಾಚುರಲ್ ಸ್ಟಾರ್' ಬಿರುದು ಪ್ರದಾನ

# 'ರುದ್ರಾಭಿಷೇಕಂ' ಹಾಡುಗಳ ಅದ್ದೂರಿ ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

'ಪ್ಯಾನ್ ಇಂಡಿಯಾ ಕ್ರಿಯೇಷನ್ಸ್' ಬೆಂಗಳೂರು ನಿರ್ಮಾಣದ 'ರುದ್ರಾಭಿಷೇಕಂ' ಚಲನಚಿತ್ರದ 'ಇಂದಲ್ಲ ನಾಳೆ' ಹಾಗೂ 'ಹೃದಯದ ಬಾಗಿಲ ತೆರೆದರೆ' ಹಾಡುಗಳ ಬಿಡುಗಡೆ ಸಮಾರಂಭವು ಹುಬ್ಬಳ್ಳಿಯ ಶ್ರೀ ಸಿದ್ಧಾರೂಢ ಸ್ವಾಮಿಗಳ ಮಠದ ಆವರಣದಲ್ಲಿ ಅದ್ದೂರಿಯಾಗಿ ನೆರವೇರಿತು.



ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಜಗದೀಶ್ ಶೆಟ್ಟರ್ ದೀಪ ಬೆಳಗಿಸಿ ಕಾರ್ಯಕ್ರಮ ಉದ್ಘಾಟಿಸಿ 'ಇಂದಲ್ಲ ನಾಳೆ' ಹಾಡಿಗೆ ಚಾಲನೆ ನೀಡಿ ಮಾತನಾಡಿ, "ಕನ್ನಡ ಚಿತ್ರರಂಗ ಇಂದು ಹಿಂದಿ ಹಾಗೂ ಇಂಗ್ಲಿಷ್ ಚಿತ್ರಗಳಿಗೆ ಪೈಪೋಟಿ ನೀಡುವ ಮಟ್ಟಕ್ಕೆ ಬೆಳೆದಿದೆ. ಪ್ರೇಕ್ಷಕರು ಕನ್ನಡ ಸಿನಿಮಾಗಳನ್ನು ಚಿತ್ರಮಂದಿರಗಳಲ್ಲೇ ನೋಡಿ ಬೆಂಬಲಿಸಬೇಕು" ಎಂದು ಹೇಳಿದರು.

ನಟ ವಿಜಯ ರಾಘವೇಂದ್ರ ಮಾತನಾಡಿ, "ಸಿದ್ಧಾರೂಢ ಮಠ ನಮ್ಮ ಕುಟುಂಬಕ್ಕೆ ಭಾವನಾತ್ಮಕವಾಗಿ ಹತ್ತಿರದ ಸ್ಥಳ. ರಾಜ್‌ಕುಮಾರ್, ಶಿವಣ್ಣ ಹಾಗೂ ಅಪ್ಪು ಮಾಮನಿಗೂ ಇದು ಅಚ್ಚುಮೆಚ್ಚಿನ ತಾಣ" ಎಂದರು. ಚಿತ್ರದಲ್ಲಿ ಮೊದಲ ಬಾರಿಗೆ ವೀರಗಾಸೆ ಕಲಾವಿದನ ಪಾತ್ರ ನಿರ್ವಹಿಸಿದ್ದು, ತಂದೆ–ಮಗನ ಪಾತ್ರದಲ್ಲಿ ಅಭಿನಯಿಸಿದ್ದೇನೆ ಎಂದು ತಿಳಿಸಿದರು.

ನಿರ್ದೇಶಕ ಕೆ. ವಸಂತ್‌ಕುಮಾರ್ ಮಾತನಾಡಿ, "ದೈವಪರ ಹಿನ್ನೆಲೆಯ ಜನಪದ ಕಲೆಯನ್ನು ಮನೆಮನೆಗೂ ತಲುಪಿಸುವ ಉದ್ದೇಶದಿಂದ ಚಿತ್ರ ನಿರ್ಮಿಸಲಾಗಿದೆ. ದೇವನಹಳ್ಳಿ, ಗೋಕರ್ಣ, ಹೊನ್ನಾವರ, ಕುಮಟಾ, ಅಬ್ಬಕ್ಕ ಫೋರ್ಟ್ ಹಾಗೂ ಅಘನಾಶಿನಿ ಹಿನ್ನೀರು ಪ್ರದೇಶಗಳಲ್ಲಿ 50ಕ್ಕೂ ಹೆಚ್ಚು ದಿನ ಚಿತ್ರೀಕರಣ ನಡೆಸಲಾಗಿದೆ. ಚಿತ್ರವು ಜೂನ್ 16ರಂದು ತೆರೆಗೆ ಬರಲಿದೆ" ಎಂದರು.

ಸಂಗೀತ ನಿರ್ದೇಶಕ ವಿ. ಮನೋಹರ್, ನಿರ್ಮಾಪಕ ಚಿದಾನಂದಮೂರ್ತಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಾಳು ಮುಗಜಿಕೊಂಡಿ, ವಿನಾಯಕ ಘೋಡಕೆ, ಗಣಪತಿ ಗಂಗೊಳ್ಳಿ, ಸಂಭಾಜಿ ಕಲಾಲ್, ಭರಮರೆಡ್ಡಿ ಪೂಜಾರ್, ವಿನಯ್ ಪಾಟೀಲ, ಇನ್ಸ್‌ಪೆಕ್ಟರ್ ಎಂ.ಎನ್. ಸಿಂಧೂರ, ನಾಯಕಿ ಪ್ರಿಯಾಂಕ ತಿಮ್ಮೇಶ, ಮಮತಾ ಮನು, ಮುತ್ತುರಾಜ್ ಟಿ ಸೇರಿದಂತೆ ಕಲಾವಿದರು, ತಂತ್ರಜ್ಞರು ಪಾಲ್ಗೊಂಡಿದ್ದರು.

ಖ್ಯಾತ ಗಾಯಕ ವಿಷ್ಣು ಹಾಗೂ ರವೀಂದ್ರ ರಾಮದುರ್ಗಕರ ಗಾಯನ ರಂಜಿಸಿತು. ಇದೇ ವೇಳೆ ವಿಜಯ ರಾಘವೇಂದ್ರರಿಗೆ ಚಿತ್ರತಂಡದಿಂದ 'ನ್ಯಾಚುರಲ್ ಸ್ಟಾರ್' ಬಿರುದು ನೀಡಿ ಗೌರವಿಸಲಾಯಿತು.

ಚಿತ್ರದಲ್ಲಿ ವಿಜಯ ರಾಘವೇಂದ್ರ, ಪ್ರಿಯಾಂಕ ತಿಮ್ಮೇಶ, ಬಲರಾಜ್ ವಾಡಿ, ಶಂಕರ ನಾರಾಯಣ್, ಮೈಸೂರು ಬಸವರಾಜ್, ಬ್ಯಾಂಕ್ ಪ್ರಸಾದ್, ಬುಲೆಟ್ ವಿನು ಸೇರಿದಂತೆ ಹಲವರು ಅಭಿನಯಿಸಿದ್ದಾರೆ. ಛಾಯಾಗ್ರಹಣ ಮುತ್ತುರಾಜ್, ಸಂಗೀತ ವಿ. ಮನೋಹರ್, ಸಾಹಸ ಥ್ರಿಲ್ಲರ್ ಮಂಜು, ನೃತ್ಯ ಸಂಯೋಜನೆ ಭಜರಂಗಿ ಮೋಹನ್ ನಿರ್ವಹಿಸಿದ್ದಾರೆ. ಕಥೆ–ಚಿತ್ರಕಥೆ ಬರೆದು ಕೆ. ವಸಂತ್‌ಕುಮಾರ್ ನಿರ್ದೇಶನ ಮಾಡಿದ್ದಾರೆ.

# ಕವಿವಿ ಬಿಒಎಸ್‌ಗೆ ಡಾ. ಅಪ್ಪಣ್ಣ ಹಂಜೆ ನೇಮಕ



**■ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ಕರ್ನಾಟಕ ವಿಶ್ವವಿದ್ಯಾಲಯದ ಪ್ರಾಚೀನ ಭಾರತೀಯ ಇತಿಹಾಸ ಮತ್ತು ಶಾಸನಶಾಸ್ತ್ರ ವಿಷಯದ ಸ್ನಾತಕ ಅಭ್ಯಾಸ ಸೂಚಿ ಮಂಡಳಿ (ಬೋರ್ಡ್ ಆಫ್ ಸ್ಟಡೀಸ್)ಗೆ ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗದ ಮುಖ್ಯಸ್ಥ ಪ್ರೊ. ಡಾ. ಅಪ್ಪಣ್ಣ ಹಂಜೆ ಅವರನ್ನು ವಿಷಯ ಪರಿಣಿತರಾಗಿ ನೇಮಕ ಮಾಡಲಾಗಿದೆ.

ಕರ್ನಾಟಕ ವಿಶ್ವವಿದ್ಯಾಲಯದ ಕುಲಪತಿಗಳ ಆದೇಶದಂತೆ 2026–27 ಹಾಗೂ 2027–28ನೇ ಸಾಲಿಗೆ ಈ ನೇಮಕಾತಿ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಡಾ. ಅಪ್ಪಣ್ಣ ಹಂಜೆ ಅವರು ಕರ್ನಾಟಕದ ಇತಿಹಾಸ, ಧರ್ಮ, ಸಂಸ್ಕೃತಿ, ಸಾಹಿತ್ಯ, ಸಮಾಜ, ದೇವಾಲಯಗಳು, ಬಸದಿಗಳು, ಶಿಲ್ಪಗಳು, ಶಾಸನಗಳು ಹಾಗೂ ಸ್ಮಾರಕಗಲ್ಲುಗಳ ಕುರಿತು ಆಳವಾದ ಸಂಶೋಧನಾ ಅಧ್ಯಯನ ಕೈಗೊಂಡಿದ್ದಾರೆ. ವಿಶೇಷವಾಗಿ ಜೈನ ಧರ್ಮದ ಸಾಂಸ್ಕೃತಿಕ ಆಯಾಮಗಳ ಕುರಿತು ಮಹತ್ವದ ಸಂಶೋಧನೆ ನಡೆಸಿರುವ ಅವರು, 15 ಕೃತಿಗಳು ಹಾಗೂ 160ಕ್ಕೂ ಹೆಚ್ಚು ಸಂಶೋಧನಾ ಲೇಖನಗಳನ್ನು ಪ್ರಕಟಿಸಿದ್ದಾರೆ.

ಹಂಪಿ ಕನ್ನಡ ವಿಶ್ವವಿದ್ಯಾಲಯದ ಚರಿತ್ರೆ ಅಧ್ಯಯನ ವಿಭಾಗದ ಸಂಯೋಜಿತ ಉಜಿರೆಯ ಎಸ್‌ಡಿಎಂ ಕಾಲೇಜಿನ ಹಾಮಾನಾ ಸಂಶೋಧನಾ ಕೇಂದ್ರದಲ್ಲಿ ಪಿಎಚ್‌ಡಿ ವಿದ್ಯಾರ್ಥಿಗಳಿಗೆ ಬಾಹ್ಯ ಮಾರ್ಗದರ್ಶಕರಾಗಿ ಸೇವೆ ಸಲ್ಲಿಸುತ್ತಿರುವ ಅವರು, ಕರ್ನಾಟಕ ಪುರಾತತ್ವ ಮತ್ತು ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿಯಾಗಿಯೂ ಶೈಕ್ಷಣಿಕ ಚಟುವಟಿಕೆಗಳಲ್ಲಿ ಸಕ್ರಿಯರಾಗಿದ್ದಾರೆ.

ಅವರ ನೇಮಕಕ್ಕೆ ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರು, ಸದಸ್ಯರು, ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಅಭಿನಂದನೆ ಸಲ್ಲಿಸಿದ್ದಾರೆ.

### 6–7ನೇ ಶತಮಾನದಲ್ಲೇ ಹಳಗನ್ನಡದ ಘಟಿಕಾಸ್ಥಾನವಾಗಿ ಬೆಳೆದ ಐತಿಹಾಸಿಕ ನೆಲ– ನಾಡೋಜ ಡಾ. ಮನು ಬಳಿಗಾರ

# “ಪುಲಿಗೆರೆ ಕನ್ನಡದ ಮೊದಲ ಸಾಹಿತ್ಯ ರಾಜಧಾನಿ!”

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

“ಆದಿಕವಿ ಪಂಪನ ನಾಡಾದ ಪುಲಿಗೆರೆ, ಇಂದಿನ ಲಕ್ಷ್ಮೇಶ್ವರ, 6–7ನೇ ಶತಮಾನದಲ್ಲೇ ಕನ್ನಡ ಸಾಹಿತ್ಯದ ರಾಜಧಾನಿಯಾಗಿ ಗುರುತಿಸಿಕೊಂಡಿತ್ತು. ಹಳಗನ್ನಡ ಸಾಹಿತ್ಯದ ಘಟಿಕಾಸ್ಥಾನವಾಗಿ ಈ ನೆಲ ಕನ್ನಡ ಸಂಸ್ಕೃತಿ, ಸಾಹಿತ್ಯ ಮತ್ತು ಇತಿಹಾಸದ ವೈಭವವನ್ನು ಜಗತ್ತಿಗೆ ಪರಿಚಯಿಸಿದೆ” ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ರಾಜ್ಯಾಧ್ಯಕ್ಷ ನಾಡೋಜ ಡಾ. ಮನು ಬಳಿಗಾರ ಹೇಳಿದರು.

ಪಟ್ಟಣದ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಸಮುದಾಯ ಭವನದಲ್ಲಿ ಬುಧವಾರ ನಡೆದ ‘ಪುಲಿಗೆರೆ ಪರಿಸರದ ಪ್ರಾಚೀನ ಕನ್ನಡ ಸಾಹಿತ್ಯ’ ಕುರಿತ ಮೂರು ದಿನಗಳ ರಾಜ್ಯಮಟ್ಟದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ, ಭಾರತೀಯ ಭಾಷಾ ಸಂಸ್ಥಾನ, ಉನ್ನತ ಶಿಕ್ಷಣ ಇಲಾಖೆ, ಶಿಕ್ಷಣ ಸಚಿವಾಲಯ, ಭಾರತ ಸರ್ಕಾರ, ಮೈಸೂರಿನ ಮಾನಸಗಂಗೋತ್ರಿ, ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಲಕ್ಷ್ಮೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತುಗಳ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಪುಲಿಗೆರೆ ಕನ್ನಡ ಸಾರಸ್ವತ ಲೋಕಕ್ಕೆ ಅಪಾರ ಕೊಡುಗೆ ನೀಡಿದ ನೆಲವಾಗಿದ್ದು, ಸಂಶೋಧನಾ ಲಿಪಿಗಳ ಕೇಂದ್ರವಾಗಿಯೂ ಮಹತ್ವ ಪಡೆದಿದೆ ಎಂದು ಹೇಳಿದರು.



ಪುಲಿಗೆರೆಯ ಶಾಸನಗಳು, ಸಾಹಿತ್ಯ, ಶಿಲ್ಪಕಲೆ, ನಾಟಕ ಹಾಗೂ ಸಂಗೀತ ಕ್ಷೇತ್ರಗಳ ಕುರಿತು ಇನ್ನಷ್ಟು ಆಳವಾದ ಸಂಶೋಧನೆ ನಡೆಯಬೇಕಿದೆ ಎಂದು ಅವರು ಅಭಿಪ್ರಾಯಪಟ್ಟರು.

ಆದಿಕವಿ ಪಂಪನ ಸಾಹಿತ್ಯ ಕ್ಷೇತ್ರವೇ ಪುಲಿಗೆರೆ ಎಂಬುದನ್ನು ಬ್ರಿಟಿಷ್ ಸಂಶೋಧಕ ಬಿ.ಎಲ್. ರೈಸ್ ಸಾಕ್ಷೀಕರಿಸಿದ್ದಾರೆ. ಹರಿಹರ, ರಾಘವಾಂಕ, ಪಾಲ್ಕುರಿಕೆ ಸೋಮನಾಥ ಹಾಗೂ ಆದಯ್ಯ ಕವಿಗಳು ಇಲ್ಲಿನ ಸೋಮೇಶ್ವರ ದೇವಸ್ಥಾನದಿಂದ ಸ್ಫೂರ್ತಿ ಪಡೆದಿದ್ದರು ಎಂದು ತಿಳಿಸಿದರು.

“ದೇಶದ ಯಾವುದೇ ಭಾಗದಲ್ಲಿ ಕಾಣದಂತಹ ನಂದಿಯ ಮೇಲೆ ಸೋಮೇಶ್ವರ ಮತ್ತು ಪಾರ್ವತಿ ಮೂರ್ತಿಗಳು ಇಲ್ಲಿರುವುದು ಪುಲಿಗೆರೆಯ ಹೆಮ್ಮೆ. ಇಂತಹ ಮಹತ್ವದ ಇತಿಹಾಸವನ್ನು ಮುಂದಿನ ಪೀಳಿಗೆಗೆ ಉಳಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ” ಎಂದು ಹೇಳಿದರು.

ಮೂರು ದಿನಗಳ ವಿಚಾರ ಸಂಕಿರಣದ ವಿಷಯಾಧಾರಿತ ಪುಸ್ತಕ ಪ್ರಕಟವಾಗಬೇಕು ಎಂದು ಸಲಹೆ ನೀಡಿದ ಅವರು, ತ್ರಿಭಾಷಾ ನೀತಿಯಿಂದ ಕನ್ನಡ ಭಾಷೆಗೆ ಆತಂಕ ಎದುರಾಗಿದೆ. ಮಾಧ್ಯಮಿಕ ಶಿಕ್ಷಣದವರೆಗೆ ಮಾತೃಭಾಷೆಯಲ್ಲೇ ಶಿಕ್ಷಣ ನೀಡಬೇಕು ಎಂದು ಒತ್ತಾಯಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಭಾರತೀಯ ಭಾಷಾ ಸಂಸ್ಥಾನದ ಯೋಜನಾ ನಿರ್ದೇಶಕ ಡಾ. ನೀಲಗಿರಿ ತಳವಾರ, “ಪಂಪನಿಗೂ ಪುಲಿಗೆರಿಗೂ ಅವಿನಾಭಾವ ಸಂಬಂಧವಿದೆ. ಐತಿಹಾಸಿಕ ಸಾಹಿತ್ಯ ಪರಂಪರೆಯ ಈ ನೆಲದಲ್ಲಿ ನಡೆಯುತ್ತಿರುವ ವಿಚಾರ ಸಂಕಿರಣಕ್ಕೆ ಎಲ್ಲರೂ ಬೆಂಬಲ ನೀಡಬೇಕು” ಎಂದರು.

> “ಪುಲಿಗೆರೆ ಮುನ್ನೂರು ಪ್ರಾಂತ್ಯಗಳ ರಾಜಧಾನಿಯಾಗಿತ್ತು. ಇಲ್ಲಿನ ಸೋಮೇಶ್ವರ ದೇವಸ್ಥಾನ ಹಾಗೂ ಶಂಖ ಬಸದಿಗಳಲ್ಲಿರುವ ನೂರಾರು ಶಾಸನಗಳು ಈ ನೆಲದ ಹಿರಿಮೆ–ಗರಿಮೆಗೆ ಸಾಕ್ಷಿಯಾಗಿವೆ”
>
> **– ಡಾ. ಮನು ಬಳಿಗಾರ,**
> ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ರಾಜ್ಯಾಧ್ಯಕ್ಷ

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಕನ್ನಡ ನಾಡು–ನುಡಿಗಾಗಿ ಪ್ರತಿಯೊಬ್ಬರೂ ಕೆಲಸ ಮಾಡಬೇಕು. ಪಟ್ಟಣದಲ್ಲಿ ನಿರ್ಮಾಣವಾಗಲಿರುವ ಕನ್ನಡ ಸಾಹಿತ್ಯ ಭವನಕ್ಕೆ ಸಹಕಾರ ನೀಡುವುದಾಗಿ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸಿದ್ದರು. ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ, ರಾಮಣ್ಣ ಲಮಾಣಿ, ವಿಶ್ರಾಂತ ಪ್ರಾಚಾರ್ಯ ಪ್ರೊ. ಶಿವಕುಮಾರ ಶಿಗ್ಲಿ, ವಿಶ್ರಾಂತ ಪ್ರಾಧ್ಯಾಪಕರಾದ ಡಾ. ಆರ್.ಬಿ. ಬನ್ನೂರ, ಪ್ರೊ. ಆರ್.ಎನ್. ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### “ತಾರುಣ್ಯದ ಆನಂದ ಕಸಿಯುತ್ತಿರುವ ಮೊಬೈಲ್ ಗೀಳು ದೇಶಕ್ಕೂ ಅಪಾಯ” : ಮನೋರೋಗ ತಜ್ಞ ಜಿತೇಂದ್ರ ಮುಗಳಿ

# ಡಿಜಿಟಲ್ ವ್ಯಸನ ಯುವಶಕ್ತಿಯನ್ನೇ ಕುಗ್ಗಿಸುತ್ತಿದೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಡಿಜಿಟಲ್ ವ್ಯಸನದಿಂದ ಯುವಜನಾಂಗ ದೈಹಿಕ ಹಾಗೂ ಮಾನಸಿಕ ಶಕ್ತಿಯನ್ನು ಕಳೆದುಕೊಂಡು ತಾರುಣ್ಯದ ಆನಂದದಿಂದ ದೂರವಾಗುತ್ತಿದೆ. ಮೆದುಳಿನ ಸೃಜನಶೀಲ ಚಿಂತನೆಗಳಿಗೆ ಧಕ್ಕೆ ಉಂಟಾಗುತ್ತಿದ್ದು, ಯುವಕರು ಮುದುಕರಂತೆ ವರ್ತಿಸುತ್ತಿದ್ದಾರೆ ಎಂದು ಜಿಮ್ಸ್‌ನ ಮನೋರೋಗ ತಜ್ಞ ಡಾ. ಜಿತೇಂದ್ರ ಮುಗಳಿ ಆತಂಕ ವ್ಯಕ್ತಪಡಿಸಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಆದರ್ಶ ಶಿಕ್ಷಣ ಸಮಿತಿಯ ವಾಣಿಜ್ಯ ಪದವಿ ಮಹಾವಿದ್ಯಾಲಯದ ಸಹಯೋಗದಲ್ಲಿ ನಡೆದ ಯುವ ಸಾಹಿತ್ಯ ಸಮಾವೇಶದ ಅಂಗವಾಗಿ ಆಯೋಜಿಸಿದ್ದ “ಡಿಜಿಟಲ್ ವ್ಯಸನ ಮತ್ತು ಮನೋದೈಹಿಕ ತೊಂದರೆಗಳು” ವಿಷಯ ಕುರಿತ ಗೋಷ್ಠಿಯಲ್ಲಿ ಅವರು ಮಾತನಾಡಿದರು.




“ಆನ್‌ಲೈನ್ ಗೇಮಿಂಗ್, ಬೆಟ್ಟಿಂಗ್ ಹಾಗೂ ರೀಲ್ಸ್ ವೀಕ್ಷಣೆಯಲ್ಲಿ ಯುವಕರು ಅಮೂಲ್ಯ ಸಮಯ ವ್ಯರ್ಥ ಮಾಡುತ್ತಿದ್ದಾರೆ. ಇದರಿಂದ ಕುಟುಂಬಗಳಲ್ಲಿ ಅಶಾಂತಿ ವಾತಾವರಣ ನಿರ್ಮಾಣವಾಗುತ್ತಿದೆ. ನಿದ್ರಾಹೀನತೆ, ನಿದ್ದೆಯಲ್ಲಿ ನಡಿಗೆ, ಮಾನಸಿಕ ಒತ್ತಡ, ಹೆಣ್ಣುಮಕ್ಕಳಲ್ಲಿ ಪಿಸಿಓಡಿ ಸೇರಿದಂತೆ ಹಲವು ಸಮಸ್ಯೆಗಳು ಹೆಚ್ಚುತ್ತಿವೆ” ಎಂದು ಎಚ್ಚರಿಸಿದರು.

ಸೈಬರ್ ಅಪರಾಧಗಳ ಕುರಿತು ಮಾತನಾಡಿದ ಎಂ.ಎಸ್. ತಿಪ್ಪಾಪೂರ, “ಒಟಿಪಿ ಸೇರಿದಂತೆ ವಿವಿಧ ಮಾರ್ಗಗಳಿಂದ ವಂಚನೆ ನಡೆಯುತ್ತಿದ್ದು, ಜನರು ಹೆಚ್ಚಿನ ಎಚ್ಚರಿಕೆ ವಹಿಸಬೇಕು” ಎಂದರು.

ವಿಭೂತಿ ಪತ್ರಿಕೆಯ ಸಹಸಂಪಾದಕಿ ಕವಿತಾ ವಿಭೂತಿ, ಸಾಮಾಜಿಕ ಜಾಲತಾಣಗಳ ದುರುಪಯೋಗದಿಂದ ಯುವಕರು ದಾರಿ ತಪ್ಪುತ್ತಿರುವ ಕುರಿತು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಡಾ. ಜಿ.ಬಿ. ಪಾಟೀಲ, “ಅಂಗೈಯಲ್ಲಿರುವ ಸಾಧನವನ್ನು ಸಾಮರ್ಥ್ಯ ವೃದ್ಧಿಗೆ ಬಳಸಬೇಕು. ಯುವಕರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳು ನಿರಂತರವಾಗಬೇಕು” ಎಂದು ಹೇಳಿದರು.

ರಾಹುಲ್ ಗಿಡ್ನಂದಿ ನಿರೂಪಿಸಿದರು. ಡಿ.ಎಸ್. ಬಾಪೂರಿ ಸ್ವಾಗತಿಸಿದರು. ಸತೀಶ ಚನ್ನಪ್ಪಗೌಡರ ವಂದಿಸಿದರು.

### ಸರ್ಕಾರದ ಮಾರ್ಗಸೂಚಿ ಕಟ್ಟುನಿಟ್ಟಾಗಿ ಪಾಲಿಸಲು ಸಿಪಿಐ ಅಯ್ಯನಗೌಡ ಪಾಟೀಲ ಕರೆ

# ಬಕ್ರೀದ್ ಶಾಂತಿ– ಸೌಹಾರ್ದತೆಯಿಂದ ಆಚರಿಸಿ



**■ವಿಜಯಸಾಕ್ಷಿ ಸುದ್ದಿ, ಡಂಬಳ**

ತ್ಯಾಗ ಮತ್ತು ಬಲಿದಾನದ ಸಂಕೇತವಾಗಿರುವ ಬಕ್ರೀದ್ ಹಬ್ಬವನ್ನು ಶಾಂತಿ, ಸೌಹಾರ್ದತೆ ಹಾಗೂ ಸಹೋದರತ್ವದ ಭಾವನೆಯೊಂದಿಗೆ ಆಚರಿಸುವುದರ ಜೊತೆಗೆ ಸರ್ಕಾರದ ಮಾರ್ಗಸೂಚಿಯನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಮುಂಡರಗಿ ಸಿಪಿಐ ಅಯ್ಯನಗೌಡ ಪಾಟೀಲ ಹೇಳಿದರು.

ಡಂಬಳ ಗ್ರಾಮದ ಪೊಲೀಸ್ ಹೊರ ಠಾಣೆಯಲ್ಲಿ ಮಂಗಳವಾರ ಆಯೋಜಿಸಿದ್ದ ಬಕ್ರೀದ್ ಹಬ್ಬದ ಶಾಂತಿ ಸಭೆಯಲ್ಲಿ ಮಾತನಾಡಿದ ಅವರು, “ಪ್ರತಿಯೊಬ್ಬರ ವ್ಯಕ್ತಿತ್ವ ಪ್ರಗತಿಯಾದಾಗ ಮಾತ್ರ ಕುಟುಂಬ ಮತ್ತು ಗ್ರಾಮ ಪ್ರಗತಿಯಾಗುತ್ತದೆ. ಪ್ರತಿ ಧರ್ಮಗಳು ಶಾಂತಿಯನ್ನು ಬಯಸುತ್ತವೆ. ಆ ಹಿನ್ನೆಲೆಯಲ್ಲಿ ಪ್ರತಿಯೊಬ್ಬರು ಶಾಂತಿಯನ್ನು ಪಾಲನೆ ಮಾಡುವುದು ಬಹಳ ಮುಖ್ಯವಾಗಿದೆ” ಎಂದು ಹೇಳಿದರು.

ಹಬ್ಬದ ಆಚರಣೆಯ ಸಂದರ್ಭದಲ್ಲಿ ಪರಸ್ಪರ ಸೌಹಾರ್ದತೆ ಕಾಪಾಡಿಕೊಂಡು ಸರ್ಕಾರದ ನಿಯಮಗಳನ್ನು ಪಾಲಿಸುವಂತೆ ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಿದ್ಧಪ್ಪ ಮಠದ, ಅಂಜುಮನ್ ಅಧ್ಯಕ್ಷ ಬಶೀರಹಮ್ಮದ ತಾಂಬೋಟಿ, ಬಸಪ್ಪ ಕೋತಂಬ್ರಿ, ಶಶಿಕಾಂತ ಬಂಡಿಹಾಳ, ರಾಜೇಸಾಬ ಹಿರೇಮನಿ, ಜಿ.ಎಂ. ಯಲಿಗಾರ, ರಾಜಪ್ಪ ಮೇವುಂಡಿ, ಮಹಬೂಬಲಿ ಆಲೂರ, ಸಿದ್ದಯ್ಯ ಕಾಡಸಿದ್ದೇಶ್ವರಮಠ, ಸುರೇಶ ಕೋತಂಬ್ರಿ, ಮಹಬೂಬಲಿ ಮೂಲಿಮನಿ, ಶ್ರೀಕಾಂತ ಹಂಚನಾಳ ಉಪಸ್ಥಿತರಿದ್ದರು.

ಪೊಲೀಸ್ ಸಿಬ್ಬಂದಿಗಳಾದ ಎಸ್.ಎಸ್. ಕೆಂಚಗಾರ, ಬಾಬುಜಾನ ಕಮ್ಮಾರ, ಎನ್.ಬಿ. ಪೂಜಾರ, ಯುವಕರು ಹಾಗೂ ಗ್ರಾಮದ ಹಿರಿಯರು ಸಭೆಯಲ್ಲಿ ಭಾಗವಹಿಸಿದ್ದರು.

### ಕೃಷಿ ಆಧಾರಿತ ಉದ್ಯಮ ಮಹಿಳಾ ಸ್ವಾವಲಂಬನೆಗೆ ಬಲ – ಯುವ ಸಾಹಿತ್ಯ ಸಮಾವೇಶದಲ್ಲಿ ಮಂಗಳಾ ನೀಲಗುಂದ ಅಭಿಮತ

# “ಕೈ ಕೆಸರಾದರೆ ಆದಾಯಕ್ಕೆ ಬರವಿಲ್ಲ”



**■ವಿಜಯಸಾಕ್ಷಿ ಸುದ್ದಿ, ಗದಗ**

“ಉದ್ಯಮ ಆರಂಭಿಸಲು ದೊಡ್ಡ ಬಂಡವಾಳವೇ ಬೇಕೆಂದಿಲ್ಲ. ದನಕರಗಳ ಸಗಣಿಯಿಂದಲೂ ಸಾವಿರಾರು ರೂಪಾಯಿ ಆದಾಯ ಗಳಿಸಬಹುದು. ಕೃಷಿ ಆಧಾರಿತ ಗೃಹ ಉದ್ಯಮಗಳು ಮಹಿಳೆಯರನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿಸಬಲ್ಲವು” ಎಂದು ಪ್ರಶಸ್ತಿ ಪುರಸ್ಕೃತ ಕೃಷಿ ಮಹಿಳೆ ಮಂಗಳಾ ನೀಲಗುಂದ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಎ.ಎಸ್.ಎಸ್. ವಾಣಿಜ್ಯ ಪದವಿ ಮಹಾವಿದ್ಯಾಲಯದ ಸಹಯೋಗದಲ್ಲಿ ನಡೆದ ಯುವ ಸಾಹಿತ್ಯ ಸಮಾವೇಶದ ಕೃಷಿಗೋಷ್ಠಿಯಲ್ಲಿ “ಕೃಷಿ ಲಾಭದಾಯಕ ವಿಧಾನಗಳು” ಕುರಿತು ಮಾತನಾಡಿದ ಅವರು, ಬೆಳೆಗೆ ಮೌಲ್ಯವರ್ಧನೆ ಮಾಡಿ ಮಾರಾಟ ಮಾಡಿದರೆ ಹೆಚ್ಚಿನ ಲಾಭ ಸಾಧ್ಯ ಎಂದು ತಿಳಿಸಿದರು.

ಸಾಮಾಜಿಕ ಜಾಲತಾಣಗಳನ್ನು ಸಕಾರಾತ್ಮಕವಾಗಿ ಬಳಸಿಕೊಂಡು ಕಲಿಯುತ್ತಲೇ ಆದಾಯದ ಕಡೆಗೆ ಯುವಕರು ಗಮನ ಹರಿಸಬೇಕು. ಸ್ವಾವಲಂಬಿ ಜೀವನವೇ ಇಂದಿನ ಅಗತ್ಯ ಎಂದು ಹೇಳಿದರು.

> “ಬೆಳೆಗೆ ಮೌಲ್ಯವರ್ಧನೆ ಮಾಡಿದರೆ ಕೃಷಿಯಲ್ಲೂ ಉತ್ತಮ ಆದಾಯ ಗಳಿಸಬಹುದು.”
>
> **– ಮಂಗಳಾ ನೀಲಗುಂದ,** ಕೃಷಿಕರು

ಪ್ರಸಾದ ಆಡಿನ ಮಾತನಾಡಿ, “ಮಣ್ಣಿನ ನಾಡಿಮಿಡಿತ ಅರಿಯಬೇಕು. ಮೇಟಿ ವಿದ್ಯೆಯೂ ಕೋಟಿ ಆದಾಯ ತರಬಲ್ಲದು. ಕೃಷಿಯಲ್ಲಿ ಹೊಸತನದ ಚಿಂತನೆ ಅಗತ್ಯ” ಎಂದರು.

ಆದರ್ಶ ಕೃಷಿ ಮಹಿಳೆ ಶಿಲ್ಪಾ ವ್ಯಾಗೇರಿ ಮಾತನಾಡಿ, “ಇಂದು ಭೂಮಿಯ ಮಹತ್ವ ಹೆಚ್ಚಾಗಿದೆ. ಸಾವಿರ ಸಂಕಷ್ಟಗಳ ನಡುವೆಯೂ ಕೃಷಿ ಜೀವಂತವಾಗಿದೆ. ವೀಕೆಂಡ್ ಫಾರ್ಮಿಂಗ್ ಮಾದರಿಯ ಹೊಸ ಪರಿಕಲ್ಪನೆಗಳತ್ತ ಯುವಕರು ಆಕರ್ಷಿತರಾಗುತ್ತಿರುವುದು ಸಂತಸದ ಸಂಗತಿ” ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಸಾವಯವ ಕೃಷಿ ತಜ್ಞ ಬಸವರಾಜ ನಾವಿ ಮಾತನಾಡಿ, “ಮಣ್ಣನ್ನು ಹೆತ್ತ ತಾಯಿಯಂತೆ ಕಾಣಬೇಕು. ಸಾವಯವ ಕೃಷಿಯೇ ಆರೋಗ್ಯಕರ ಬದುಕಿಗೆ ದಾರಿ” ಎಂದು ತಿಳಿಸಿದರು.

ನಿವೃತ್ತ ಕೃಷಿ ಅಧಿಕಾರಿ ಸುರೇಶ ಕುಂಬಾರ ಮಾತನಾಡಿ, “ರೈತರ ಆದಾಯ ಹೆಚ್ಚಾಗಲು ಏಕಬೆಳೆ ಪದ್ಧತಿಯಿಂದ ಹೊರಬರಬೇಕು. ಜಗತ್ತಿನ ಹಸಿದ ಹೊಟ್ಟೆಗೆ ಅನ್ನ ನೀಡಬಲ್ಲ ಏಕೈಕ ಕ್ಷೇತ್ರ ಕೃಷಿ” ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದವೂ ನಡೆಯಿತು. ಪ್ರಾಚಾರ್ಯ ಆರ್.ಆರ್. ಕುಲಕರ್ಣಿ ವೇದಿಕೆ ಮೇಲೆ ಉಪಸ್ಥಿತರಿದ್ದರು. ರವಿ ದೇವರಡ್ಡಿ ಕಾರ್ಯಕ್ರಮ ನಿರೂಪಿಸಿದರು. ವಿಜಯಲಕ್ಷ್ಮೀ ಓಲೇಕಾರ ವಂದಿಸಿದರು.

### ವಿದ್ಯಾರ್ಥಿ ಪ್ರತಿಭಾ ಪುರಸ್ಕಾರ, ಸಾಧಕಶ್ರೀ ಪ್ರಶಸ್ತಿ ಪ್ರದಾನ ಹಾಗೂ ನಿವೃತ್ತ ದಂಪತಿಗಳಿಗೆ ಸನ್ಮಾನ

# ಮೇ.24ರಂದು ವಿಶ್ವಕರ್ಮ ಸಮಾಜದ ಪ್ರತಿಭಾ ಸಂಭ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಅಂಗ ಸಂಸ್ಥೆಗಳ ಸಹಯೋಗದಲ್ಲಿ 8ನೇ ವರ್ಷದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ, ಕಲಿಕಾ ಸಾಮಗ್ರಿಗಳ ವಿತರಣೆ, ವಿಶ್ವಕರ್ಮ ನೌಕರಶ್ರೀ ಮತ್ತು ವಿಶ್ವಕರ್ಮ ಸಾಧಕಶ್ರೀ ಪ್ರಶಸ್ತಿ ಪ್ರದಾನ ಹಾಗೂ ನಿವೃತ್ತ ನೌಕರ ದಂಪತಿಗಳ ಸನ್ಮಾನ ಸಮಾರಂಭವನ್ನು ಮೇ 24ರಂದು ನಗರದಲ್ಲಿ ಆಯೋಜಿಸಲಾಗಿದೆ.

ನಗರದ ಗಂಗಿಮಡಿ ಕ್ರಾಸ್‌ನ ವಿಜಯನಗರ ಬಡಾವಣೆಯಲ್ಲಿರುವ ಶ್ರೀ ವಿಶ್ವಕರ್ಮ ಭವನದಲ್ಲಿ ಭಾನುವಾರ ಬೆಳಗ್ಗೆ 9.30ಕ್ಕೆ ಕಾರ್ಯಕ್ರಮ ನಡೆಯಲಿದೆ ಎಂದು ಸಂಘದ ಅಧ್ಯಕ್ಷ ರಾಜಗೋಪಾಲ ಡಿ. ಕಡ್ಲಿಕೊಪ್ಪ ತಿಳಿಸಿದರು.



ಬುಧವಾರ ವಿಶ್ವಕರ್ಮ ಭವನದಲ್ಲಿ ನಡೆದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಶಿರೋಳ ಯಚ್ಚರಸ್ವಾಮಿಗಳ ಸಂಸ್ಥಾನ ಗವಿಮಠದ ಶ್ರೀ ಅಭಿನವ ಯಚ್ಚರ ಮಹಾಸ್ವಾಮೀಜಿ ಸಾನಿಧ್ಯ ವಹಿಸಲಿದ್ದಾರೆ ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಕಾರ್ಯಕ್ರಮ ಉದ್ಘಾಟಿಸಲಿದ್ದು, ಸಂಘದ ಅಧ್ಯಕ್ಷ ರಾಜಗೋಪಾಲ ಡಿ. ಕಡ್ಲಿಕೊಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪನಿರ್ದೇಶಕ ಕೆ.ಡಿ. ಬಡಿಗೇರ, ಧಾರವಾಡ ಜಿಲ್ಲಾ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಅಧ್ಯಕ್ಷ ಕಾಳಪ್ಪ ವ್ಹಿ. ಬಡಿಗೇರ, ರಾಯಚೂರು ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಡಾ. ಮೋಹನ ವೈ. ಪತ್ತಾರ, ಧಾರವಾಡ ಜಿಲ್ಲಾ ಸಂಘದ ಅಧ್ಯಕ್ಷ ವಿಠ್ಠಲ ಜಿ. ಕಮ್ಮಾರ, ಹಾವೇರಿ ಜಿಲ್ಲಾ ಸಂಘದ ಅಧ್ಯಕ್ಷ ಈರಪ್ಪ ಶ. ಪಂಚಾನನ, ಬಾಗಲಕೋಟ ತಾಲೂಕು ಸಂಘದ ಅಧ್ಯಕ್ಷ ದೇವೇಂದ್ರಪ್ಪ ಮ. ಅಗಲತಕಟ್ಟಿ ಸೇರಿದಂತೆ ವಿವಿಧ ಜಿಲ್ಲೆಗಳ ಸಂಘಗಳ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ.

ರಾಯಚೂರು ಜಿಲ್ಲಾ ಸಂಘದ ಪ್ರಧಾನ ಕಾರ್ಯದರ್ಶಿ ಕೆ. ರಾಮು ಗಾಣದಾಳ, ಕೊಪ್ಪಳ ತಾಲೂಕು ವಿಶ್ವಕರ್ಮ ಸಮಾಜದ ಅಧ್ಯಕ್ಷ ದೇವೇಂದ್ರಪ್ಪ ಎಚ್. ಬಡಿಗೇರ, ಕೊಪ್ಪಳ ಜಿಲ್ಲಾ ಸಂಘದ ನಿರ್ದೇಶಕ ಹಾಗೂ ಸಮಾಜದ ಕಾರ್ಯಾಧ್ಯಕ್ಷ ರುದ್ರಪ್ಪ ಕೆ. ಬಡಿಗೇರ, ಶಹಾಪುರ ತಾಲೂಕು ಸಂಘದ ಅಧ್ಯಕ್ಷ ಮೌನೇಶ ಕೆಂಭಾವಿ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ಕಲಿಕಾ ಸಾಮಗ್ರಿಗಳ ವಿತರಣೆ, ವಿಶ್ವಕರ್ಮ ನೌಕರಶ್ರೀ ಹಾಗೂ ಸಾಧಕಶ್ರೀ ಪ್ರಶಸ್ತಿ ಪ್ರದಾನ, ನಿವೃತ್ತ ನೌಕರ ದಂಪತಿಗಳ ಸನ್ಮಾನ ಕಾರ್ಯಕ್ರಮದಲ್ಲಿ ಜಿಲ್ಲೆಯ ಸಮಸ್ತ ವಿಶ್ವಕರ್ಮ ಬಂಧುಗಳು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ರಾಜಗೋಪಾಲ ಡಿ. ಕಡ್ಲಿಕೊಪ್ಪ ಮನವಿ ಮಾಡಿದರು.

ಸಭೆಯಲ್ಲಿ ಡಾ. ಸಿ.ವಿ. ಬಡಿಗೇರ, ವಿಶ್ವನಾಥ ಯ. ಕಮ್ಮಾರ, ಶ್ರೀಧರ ಕೊಣ್ಣೂರ, ಮೌನೇಶ ಸಿ. ಬಡಿಗೇರ, ಮಹೇಶ ಕಮ್ಮಾರ, ವಿಶ್ವನಾಥ ರಾಜನಾಳ, ಸುಮಂಗಲಾ ಪತ್ತಾರ, ಶಂಕರ ಪತ್ತಾರ, ಆನಂದ ಕಮ್ಮಾರ, ನಾಗರಾಜ ಕಮ್ಮಾರ, ಶಂಕರ ಕಂಚಗಾರ, ಗೋಪಾಲ ಬಡಿಗೇರ, ಕುಮಾರ ಬಡಿಗೇರ, ಪ್ರಕಾಶ ಬಡಿಗೇರ, ಈರಣ್ಣ ಬಡಿಗೇರ, ವಿಶ್ವನಾಥ ಪತ್ತಾರ, ಮಧುಸೂದನ ವಿಶ್ವಕರ್ಮ ಸೇರಿದಂತೆ ಸಮಾಜದ ಮುಖಂಡರು ಹಾಗೂ ಬಾಂಧವರು ಉಪಸ್ಥಿತರಿದ್ದರು.

# ತೋಂಟದಾರ್ಯ ಮಠದಲ್ಲಿ ‘ಖೋಲಾ’ ಕಾದಂಬರಿ ಲೋಕಾರ್ಪಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶ್ರೀ ಜಗದ್ಗುರು ತೋಂಟದಾರ್ಯ ಮಠದಲ್ಲಿ ನಡೆದ 2798ನೇ ಶಿವಾನುಭವ ಕಾರ್ಯಕ್ರಮದಲ್ಲಿ ಶಿರಶಿಯ ಖ್ಯಾತ ವೈದ್ಯ, ಸಾಹಿತಿ ಡಾ. ಕೆ.ಬಿ. ಪವಾರ ಅವರ ‘ಖೋಲಾ’ ಗೊರಬೋಲಿ ಬಂಜಾರ ಕಾದಂಬರಿಯನ್ನು ಲೋಕಾರ್ಪಣೆ ಮಾಡಲಾಯಿತು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಪೂಜ್ಯ ಶ್ರೀ ಮುನ್ನಿರಂಜನ ಡಾ. ತೋಂಟದ ಸಿದ್ದರಾಮ ಮಹಾಸ್ವಾಮೀಜಿ ಮಾತನಾಡಿ, “ಬಂಜಾರ ಸಮುದಾಯದಲ್ಲಿ ಸಾಹಿತ್ಯದ ಓದು–ಬರವಣಿಗೆ ಹೆಚ್ಚಳವಾಗಿ, ‘ಖೋಲಾ’ ಕೃತಿ ಸಂಸ್ಕೃತಿ ಮತ್ತು ಮಾನವೀಯ ಮೌಲ್ಯಗಳನ್ನು ಉಳಿಸಲಿ” ಎಂದು ಆಶಿಸಿದರು. ಕರ್ನಾಟಕ ಬಂಜಾರ ಸಾಂಸ್ಕೃತಿಕ ಮತ್ತು ಭಾಷಾ ಅಕಾಡೆಮಿ ಅಧ್ಯಕ್ಷ ಡಾ. ಎಂ.ಆರ್. ಚವ್ಹಾಣ ನಗಾರಿ ಬಾರಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ, ಬಂಜಾರ ಜಾನಪದ ಸಾಹಿತ್ಯದ ಮಹತ್ವ ವಿವರಿಸಿದರು.



ಲೇಖಕ ಡಾ. ಕೆ.ಬಿ. ಪವಾರ ಮಾತನಾಡಿ, “ನಶಿಸುತ್ತಿರುವ ಬಂಜಾರ ಭಾಷೆ ಹಾಗೂ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಉಳಿಸುವ ಉದ್ದೇಶದಿಂದ ‘ಖೋಲಾ’ ಕೃತಿಯನ್ನು ರಚಿಸಿದ್ದೇನೆ” ಎಂದರು.

ಕಾರ್ಯಕ್ರಮದಲ್ಲಿ ಗಂಗಾಳ ವಾಜಾ, ಲಂಬಾಣಿ ನೃತ್ಯ, ಜಾನಪದ ಹಾಡುಗಳು ಹಾಗೂ ಭಜನೆಗಳು ಗಮನ ಸೆಳೆದವು. ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಗಣ್ಯರು ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

## "ಇನ್ನು ಕಸಕ್ಕೂ ಕಾನೂನಿನ ಕಟ್ಟುಪಾಡು!"

▶▶ ಮೊದಲನೇ ಪುಟದಿಂದ

ದಿನಕ್ಕೆ 100 ಕೆಜಿಗೂ ಅಧಿಕ ಕಸ ಉತ್ಪಾದಿಸುವ ಅಥವಾ 40 ಸಾವಿರ ಲೀಟರ್‌ಗಿಂತ ಹೆಚ್ಚು ನೀರು ಬಳಸುವ ಹಾಗೂ 20 ಸಾವಿರ ಚದರ ಮೀಟರ್‌ಗಿಂತ ಹೆಚ್ಚು ವಿಸ್ತೀರ್ಣ ಹೊಂದಿರುವ ಸಂಸ್ಥೆಗಳು ಈ ನಿಯಮದ ವ್ಯಾಪ್ತಿಗೆ ಬರುತ್ತವೆ ಎಂದರು.

ಹೊಸ ಘನ ತ್ಯಾಜ್ಯ ನಿರ್ವಹಣಾ ನಿಯಮಗಳು ಹಾಗೂ ತ್ಯಾಜ್ಯ ವಿಲೇವಾರಿ ಕುರಿತಂತೆ ಸಾರ್ವಜನಿಕರಿಗೆ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದು ಹೇಳಿದರು.

ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ ಮಾತನಾಡಿ, ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2026 ಎಪ್ರಿಲ್ 1ರಿಂದ ಜಾರಿಗೆ ಬಂದಿವೆ ಎಂದು ಹೇಳಿದರು.

"ಸೆಪ್ಟೆಂಬರ್ 30, 2026ರೊಳಗೆ ಎಲ್ಲಾ ರಾಜ್ಯಗಳು ಹಾಗೂ ಸ್ಥಳೀಯ ಸಂಸ್ಥೆಗಳು ತಮ್ಮದೇ ಆದ ರಾಜ್ಯ ನೀತಿಯನ್ನು ಅಂತಿಮಗೊಳಿಸಬೇಕು" ಎಂದು ಬಸನಗೌಡ ಕೋಟೂರ ತಿಳಿಸಿದರು.

ಅಕ್ಟೋಬರ್ 30, 2026ರೊಳಗೆ ನಗರ ಪ್ರದೇಶಗಳಲ್ಲಿನ ಹಳೆಯ ಕಸದ ರಾಶಿಗಳ ಭೌಗೋಳಿಕ ಮ್ಯಾಪಿಂಗ್ ಪ್ರಕ್ರಿಯೆ ಪೂರ್ಣಗೊಳಿಸಬೇಕು. ಅಕ್ಟೋಬರ್ 31, 2027ರೊಳಗೆ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಕಸ ನಿರ್ವಹಣೆಗೆ ಸಂಬಂಧಿಸಿದ ಉಪ–ಕಾಯ್ದೆಗಳನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕು ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಚಳಗೇರಿ, ಪರಿಸರ ಅಧಿಕಾರಿ ಲೋಹಿತ್ ಕುಮಾರ್ ಪಿ.ಜೆ., ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ಗದಗ–ಬೆಟಗೇರಿ ನಗರಸಭೆಯ ಕಾರ್ಯಕಾರಿ ಅಭಿಯಂತರ (ಪರಿಸರ) ಆನಂದ ಬದಿ, ಎಸ್‌ಡಬ್ಲ್ಯುಎಂ ತಜ್ಞ ಕೊಟ್ರೇಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

**ಅಕ್ಟೋಬರ್ 7ರವರೆಗೆ ಕಾರ್ಯಾಚರಣೆ; ಸಾರ್ವಜನಿಕರು, ರಾಜಕೀಯ ಪಕ್ಷಗಳ ಸಹಕಾರಕ್ಕೆ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಮನವಿ**

# ಜೂ.30ರಿಂದ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಆರಂಭ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಧಾರವಾಡ ಜಿಲ್ಲೆಯಲ್ಲಿ ಜೂನ್ 30ರಿಂದ ಅಕ್ಟೋಬರ್ 7ರವರೆಗೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ–2026 ಕಾರ್ಯ ನಡೆಯಲಿದ್ದು, ಈ ಪ್ರಕ್ರಿಯೆ ಯಶಸ್ವಿಯಾಗಿ ಜರುಗಲು ಸಾರ್ವಜನಿಕರು ಹಾಗೂ ರಾಜಕೀಯ ಪಕ್ಷಗಳು ಸಹಕಾರ ನೀಡಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಮನವಿ ಮಾಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿಯ ಸಮಗ್ರತೆ ಕಾಪಾಡಿಕೊಳ್ಳುವುದು ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗೆ ಅತ್ಯಗತ್ಯ ಎಂದರು.

"ಜಿಲ್ಲೆಯಲ್ಲಿ ಮತದಾರರ ಮ್ಯಾಪಿಂಗ್ ಕಾರ್ಯ ಈಗಾಗಲೇ ಶೇ.89.94ರಷ್ಟು ಪೂರ್ಣಗೊಂಡಿದ್ದು, ಶೇ.100 ಸಾಧಿಸುವ ಗುರಿ ಹೊಂದಲಾಗಿದೆ. ಮತಗಟ್ಟೆ ಮಟ್ಟದ ಏಜೆಂಟರು (ಬಿಎಲ್‌ಎ) ಹಾಗೂ ಮತಗಟ್ಟೆ ಅಧಿಕಾರಿಗಳು (ಬಿಎಲ್‌ಒ) ಸಮನ್ವಯದಿಂದ ಕಾರ್ಯನಿರ್ವಹಿಸಬೇಕು" ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಎಡಿಸಿ ಗೀತಾ ಸಿ.ಡಿ., ಚುನಾವಣಾ ವಿಭಾಗದ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

**ಭಾರತ ಚುನಾವಣಾ ಆಯೋಗ ಪ್ರಕಟಿಸಿದ ವೇಳಾಪಟ್ಟಿಯಂತೆ**

ಜೂನ್ 20ರಿಂದ 29ರವರೆಗೆ ಪೂರ್ವ ಸಿದ್ಧತೆ, ತರಬೇತಿ ಮತ್ತು ಮುದ್ರಣ ಕಾರ್ಯ, ಜೂನ್ 30ರಿಂದ ಜುಲೈ 29ರವರೆಗೆ ಮನೆಮನೆಗೆ ಭೇಟಿ, ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿ ಪ್ರಕಟ, ಆಗಸ್ಟ್ 5ರಿಂದ ಸೆಪ್ಟೆಂಬರ್ 4ರವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಕೆ,

ಸೆಪ್ಟೆಂಬರ್ 5ರಿಂದ ಅಕ್ಟೋಬರ್ 3ರವರೆಗೆ ಅರ್ಜಿಗಳ ವಿಲೇವಾರಿ,

ಅಕ್ಟೋಬರ್ 7ರಂದು ಅಂತಿಮ ಮತದಾರರ ಪಟ್ಟಿ ಪ್ರಕಟ




**"20 ವರ್ಷಗಳ ಬಳಿಕ ಸಮಗ್ರ ಪರಿಷ್ಕರಣೆ"**

"2002–04ರ ನಂತರ ಇದೀಗ 20 ವರ್ಷಗಳ ಬಳಿಕ ಸಮಗ್ರ ಪರಿಷ್ಕರಣೆ ನಡೆಯುತ್ತಿದೆ. ಪುನರಾವರ್ತಿತ ಹೆಸರುಗಳು, ಮೃತರ ಹೆಸರುಗಳು ಹಾಗೂ ವಲಸೆಯಿಂದ ಉಂಟಾಗಿರುವ ದೋಷಗಳನ್ನು ಸರಿಪಡಿಸಲು ಈ ಪ್ರಕ್ರಿಯೆ ಸಹಕಾರಿಯಾಗಲಿದೆ" ಎಂದು ಜಿಲ್ಲಾಧಿಕಾರಿ ಹೇಳಿದರು.

ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 1,665 ಮತಗಟ್ಟೆಗಳಿದ್ದು, ಮೇ 19ರ ವೇಳೆಗೆ ಒಟ್ಟು 16,23,933 ಮತದಾರರಿದ್ದಾರೆ. ಇದರಲ್ಲಿ 8,06,478 ಪುರುಷರು, 8,17,358 ಮಹಿಳೆಯರು ಹಾಗೂ 97 ಲಿಂಗತ್ವ ಅಲ್ಪಸಂಖ್ಯಾತ ಮತದಾರರು ಸೇರಿದ್ದಾರೆ.

**ಊರಮ್ಮ–ದ್ಯಾಮಮ್ಮಗೆ ಬೀಜದ ಉಡಿ ತುಂಬಿ ಉತ್ತಮ ಮಳೆ, ಸಮೃದ್ಧ ಬೆಳೆಗೆ ರೈತರ ಪ್ರಾರ್ಥನೆ**

# ಮುಂಗಾರಿಗೆ ಮೊರೆ ಹೋದ ತಂಬ್ರಹಳ್ಳಿ..!



■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಮುಂಗಾರು ಮಳೆಯ ಆಗಮನದ ನಿರೀಕ್ಷೆಯಲ್ಲಿರುವ ರೈತ ಸಮುದಾಯ ತಂಬ್ರಹಳ್ಳಿ ಗ್ರಾಮದೇವತೆ ಊರಮ್ಮ–ದ್ಯಾಮಮ್ಮನ ಮೊರೆ ಹೋಗಿದ್ದು, ಅಮ್ಮನವರಿಗೆ ಬೀಜದ ಉಡಿ ತುಂಬುವ ವಿಶೇಷ ಧಾರ್ಮಿಕ ಕಾರ್ಯಕ್ರಮ ಭಕ್ತಿಭಾವದಿಂದ ನೆರವೇರಿತು.

ತಾಲೂಕಿನ ತಂಬ್ರಹಳ್ಳಿ ಗ್ರಾಮದಲ್ಲಿ ನಡೆದ ಈ ಸಂಪ್ರದಾಯಬದ್ಧ ಆಚರಣೆಯಲ್ಲಿ ರೈತರು ಹಾಗೂ ಗ್ರಾಮಸ್ಥರು ವಿವಿಧ ಬಿತ್ತನೆ ಬೀಜಗಳನ್ನು ಅಮ್ಮನವರಿಗೆ ಉಡಿ ತುಂಬಿ ವಿಶೇಷ ಪೂಜೆ ಸಲ್ಲಿಸಿದರು. ಉತ್ತಮ ಮಳೆ, ಸಮೃದ್ಧ ಬೆಳೆ ಹಾಗೂ ಗ್ರಾಮದಲ್ಲಿ ಸುಖ–ಶಾಂತಿ ನೆಲೆಸಲಿ ಎಂದು ಪ್ರಾರ್ಥಿಸಿದರು.

ಗ್ರಾಮದ ದೈವಸ್ಥರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದ ಅಂಗವಾಗಿ ಗ್ರಾಮದ ಬಣಕಾರರ ಮನೆಯಿಂದ ಕಳಸವನ್ನು ಮೆರವಣಿಗೆಯ ಮೂಲಕ ದೇವಸ್ಥಾನಕ್ಕೆ ತರಲಾಯಿತು. ವಿವಿಧ ವಾದ್ಯಗಳ ಘೋಷ, ಭಕ್ತರ "ಉಧೋ.. ಉಧೋ.." ಘೋಷಣೆಗಳ ನಡುವೆ ಗ್ರಾಮದಲ್ಲಿನ ವಿವಿಧ ದೇವಸ್ಥಾನಗಳಿಗೆ ತೆರಳಿ ಬೀಜದ ಉಡಿ ತುಂಬಿ ಪೂಜೆ ಸಲ್ಲಿಸಲಾಯಿತು.

ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಭಕ್ತಿಭಾವದಿಂದ ಅಮ್ಮನವರ ದೇವಸ್ಥಾನಗಳಿಗೆ ತೆರಳಿ ಪೂಜೆ ಸಲ್ಲಿಸಿದರು. ಧಾರ್ಮಿಕ ವಿಧಿವಿಧಾನಗಳಿಗೆ ಸಾಕ್ಷಿಯಾದ ಗ್ರಾಮಸ್ಥರು ಅಮ್ಮನವರ ದೇವಸ್ಥಾನದಿಂದ ಬಿತ್ತನೆ ಬೀಜವನ್ನು ಪಡೆದುಕೊಂಡರು.

ಮುಂಗಾರು ಮಳೆ ಆರಂಭದ ವೇಳೆಯಲ್ಲಿ ಈ ಪವಿತ್ರ ಬೀಜಗಳನ್ನು ಮೊದಲು ಬಿತ್ತನೆ ಮಾಡಿದರೆ ಉತ್ತಮ ಬೆಳೆ ಬರುತ್ತದೆ ಎಂಬುದು ಇಲ್ಲಿನ ರೈತರ ನಂಬಿಕೆಯಾಗಿದೆ.

ಗ್ರಾಮೀಣ ಬದುಕು, ಕೃಷಿ ಸಂಸ್ಕೃತಿ ಹಾಗೂ ಧಾರ್ಮಿಕ ನಂಬಿಕೆಗಳನ್ನು ಒಟ್ಟುಗೂಡಿಸುವ ಈ ಆಚರಣೆ ತಂಬ್ರಹಳ್ಳಿಯಲ್ಲಿ ವರ್ಷಂಪ್ರತಿ ನಡೆಯುತ್ತಿದ್ದು, ರೈತರ ಬದುಕಿನಲ್ಲಿ ವಿಶೇಷ ಸ್ಥಾನ ಪಡೆದುಕೊಂಡಿದೆ.

> "ಪ್ರತಿ ವರ್ಷವೂ ಮುಂಗಾರು ಆರಂಭಕ್ಕೂ ಮುನ್ನ ಈ ಸಂಪ್ರದಾಯ ನಡೆಯುತ್ತದೆ. ಇದು ಗ್ರಾಮೀಣ ಸಂಸ್ಕೃತಿ, ಕೃಷಿ ಪರಂಪರೆ ಹಾಗೂ ದೇವರ ಮೇಲಿನ ನಂಬಿಕೆಯನ್ನು ಪ್ರತಿಬಿಂಬಿಸುತ್ತದೆ. ಗ್ರಾಮದಲ್ಲಿ ಮಳೆ–ಬೆಳೆ ಚೆನ್ನಾಗಿ ಆಗಿ ಎಲ್ಲರಿಗೂ ಸಮೃದ್ಧಿ ಬರಲಿ ಎಂದು ಪ್ರಾರ್ಥಿಸಿದ್ದೇವೆ."
>
> **– ಟಿ. ವೆಂಕೋಬಪ್ಪ, ನಿವೃತ್ತ ಇಒ, ತಂಬ್ರಹಳ್ಳಿ ಗ್ರಾಮಸ್ಥ**

**ಸಹಕಾರ ಸಂಘಗಳ ಬಲವರ್ಧನೆಗೆ ರೈತರ ಸಹಕಾರ ಅಗತ್ಯ– ಜಿ.ವಿ. ಪಾಟೀಲ**

# ಸಾಲ ಪಡೆದು ಅಭಿವೃದ್ಧಿ ಸಾಧಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಹಕಾರ ಸಂಘಗಳಿಂದ ಪಡೆದ ಸಾಲವನ್ನು ರೈತರು ಸದುಪಯೋಗಪಡಿಸಿಕೊಂಡು, ಸಕಾಲಕ್ಕೆ ಮರುಪಾವತಿ ಮಾಡಬೇಕು. ಆಗ ಮಾತ್ರ ಸಹಕಾರ ಸಂಘಗಳು ಮತ್ತಷ್ಟು ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ ಎಂದು ಕೆಸಿಸಿ ಬ್ಯಾಂಕ್ ನಿರ್ದೇಶಕ ಜಿ.ವಿ. ಪಾಟೀಲ ಹೇಳಿದರು.

ತಾಲೂಕಿನ ಸೂರಣಗಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ರೈತ ಫಲಾನುಭವಿಗೆ ಕಡಿಮೆ ಬಡ್ಡಿ ದರದಲ್ಲಿ ಟ್ರಾಕ್ಟರ್ ವಿತರಿಸಿ ಅವರು ಮಾತನಾಡಿದರು.

ರೈತರ ಅನುಕೂಲಕ್ಕಾಗಿ ಹೈನುಗಾರಿಕೆ, ಅಡಿಕೆ ಹಾಗೂ ಬಾಳೆ ಬೆಳೆ ಅಭಿವೃದ್ಧಿಗೆ ಕಡಿಮೆ ಬಡ್ಡಿದರದಲ್ಲಿ ಸಾಲ ಸೌಲಭ್ಯ ನೀಡಲಾಗುತ್ತಿದೆ ಎಂದು ತಿಳಿಸಿದರು. ಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ತಾಲೂಕುಗಳಲ್ಲಿ ಈಗಾಗಲೇ 200ಕ್ಕೂ ಹೆಚ್ಚು ಟ್ರಾಕ್ಟರ್‌ಗಳನ್ನು ರೈತರಿಗೆ ವಿತರಿಸಲಾಗಿದೆ. ರೈತರ ಆರ್ಥಿಕ ಸಬಲೀಕರಣಕ್ಕಾಗಿ ಇನ್ನೂ ಹಲವು ಯೋಜನೆಗಳನ್ನು ರೂಪಿಸಲಾಗಿದೆ ಎಂದು ಜಿ.ವಿ. ಪಾಟೀಲ ಹೇಳಿದರು.

ಕಾರ್ಯಕ್ರಮದಲ್ಲಿ ಸೂರಣಗಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷೆ ಶಶಿಕಲಾ ಬಸವರಾಜ ಸಾಸಲವಾಡ, ಉಪಾಧ್ಯಕ್ಷ ಪ್ರಕಾಶ ಕಳ್ಳಿಹಾಳ, ನಿರ್ದೇಶಕರಾದ ಚಂದ್ರಶೇಖರ ಮೂಲಿಮನಿ, ಮಲ್ಲಿಕಾರ್ಜುನಯ್ಯ ಹಿರೇಮಠ, ಶಿದ್ದಯ್ಯ ಮಾದಾಪುರಮಠ, ಫಕ್ಕೀರಪ್ಪ ಇಟಗಿ, ಮಹಮ್ಮದ ಆಸಿಫ್ ಗೋನಾಳ, ಸುರೇಶ ಕಾಕೋಳ, ಲಕ್ಕಪ್ಪ ದಾಸರ, ರಾಮಣ್ಣ ಕಾಶಿಕೋವಿ, ಶಕುಂತಲಾ ಶಂಕ್ರಪ್ಪ ಶೀರನಹಳ್ಳಿ, ಲಕ್ಷ್ಮೀ ಶರಣಪ್ಪ ಪೂಜಾರ ಹಾಗೂ ಬಸವರಾಜ ಸಾಸಲವಾಡ ಉಪಸ್ಥಿತರಿದ್ದರು.

**ವರದಾಪುರದಲ್ಲಿ ಉಚಿತ ಹೊಲಿಗೆ ತರಬೇತಿ ಪೂರ್ಣಗೊಳಿಸಿದ ಮಹಿಳೆಯರಿಗೆ ಯಂತ್ರ ವಿತರಣೆ**

# ಮಹಿಳೆಯರ ಸ್ವಾವಲಂಬನೆಯೇ ದೇಶದ ಅಭಿವೃದ್ಧಿಗೆ ಶಕ್ತಿ

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

"ಮಹಿಳೆಯರು ಸ್ವಾವಲಂಬಿಯಾಗಿ ಬದುಕು ಕಟ್ಟಿಕೊಂಡಾಗ ಮಾತ್ರ ಕುಟುಂಬದ ಆರ್ಥಿಕ ಸ್ಥಿತಿ ಸುಧಾರಿಸುವುದರ ಜೊತೆಗೆ ದೇಶದ ಅಭಿವೃದ್ಧಿಗೂ ಬಲ ಸಿಗುತ್ತದೆ" ಎಂದು ಎಸ್‌ಎಲ್‌ಆರ್ ಮೆಟಾಲಿಕ್ಸ್ ಸಂಸ್ಥೆಯ ಅಧಿಕಾರಿ ದೀಪಿಕಾ ಹೇಳಿದರು.




ಹಗರಿಬೊಮ್ಮನಹಳ್ಳಿ ತಾಲೂಕಿನ ವರದಾಪುರ ಗ್ರಾಮದಲ್ಲಿ ಎಸ್‌ಎಲ್‌ಆರ್ ಮೆಟಾಲಿಕ್ಸ್ ಹಾಗೂ ಚೈತನ್ಯ ಗ್ರಾಮೀಣ ಅಭಿವೃದ್ಧಿ ಎಜುಕೇಷನಲ್ ಟ್ರಸ್ಟ್ ಸಹಯೋಗದಲ್ಲಿ ಆಯೋಜಿಸಿದ್ದ ಆರು ತಿಂಗಳ ಉಚಿತ ಹೊಲಿಗೆ ತರಬೇತಿ ಸಮಾರೋಪ ಹಾಗೂ ಹೊಲಿಗೆ ಯಂತ್ರ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಹಿಳೆಯರು ಸ್ವಯಂ ಉದ್ಯೋಗದ ಮೂಲಕ ಸಬಲೀಕರಣ ಹೊಂದಿದಾಗ ಕುಟುಂಬಗಳು ಆರ್ಥಿಕ ಸಂಕಷ್ಟದಿಂದ ಹೊರಬರಲು ಸಾಧ್ಯವಾಗುತ್ತದೆ. ಆತ್ಮವಿಶ್ವಾಸದಿಂದ ಸ್ವಂತ ಉದ್ಯೋಗ ಆರಂಭಿಸಿ ಸಮಾಜದಲ್ಲಿ ಮಾದರಿಯಾಗಬೇಕು ಎಂದು ಕರೆ ನೀಡಿದರು.

ಎಸ್‌ಎಲ್‌ಆರ್ ಸಂಸ್ಥೆಯ ಸಿಎಸ್‌ಆರ್ ವಿಭಾಗದ ಮುಖ್ಯಸ್ಥ ಕೆ. ಮಲ್ಲಿಕಾರ್ಜುನ ಮಾತನಾಡಿ, ಸಂಸ್ಥೆಯಿಂದ ನೀಡಲಾಗಿರುವ ತರಬೇತಿಯನ್ನು ಸದುಪಯೋಗಪಡಿಸಿಕೊಂಡು ಮಹಿಳೆಯರು ಸ್ವಂತ ಟೈಲರಿಂಗ್ ಅಂಗಡಿ ಆರಂಭಿಸುವುದರ ಜೊತೆಗೆ ಇತರರಿಗೂ ತರಬೇತಿ ನೀಡುವ ಮೂಲಕ ಮತ್ತಷ್ಟು ಜನರಿಗೆ ಉದ್ಯೋಗಾವಕಾಶ ಕಲ್ಪಿಸಬೇಕು ಎಂದು ಹೇಳಿದರು.

ಸಂಸ್ಥೆಯ ವತಿಯಿಂದ ವಿದ್ಯಾರ್ಥಿ ಮಿತ್ರ, ರೈತ ಮಿತ್ರ ಸೇರಿದಂತೆ ಹಲವು ಜನಪರ ಯೋಜನೆಗಳನ್ನು ಜಾರಿಗೆ ತರಲಾಗುತ್ತಿದ್ದು, ಗ್ರಾಮೀಣ ಭಾಗದ ಜನರು ಅವುಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಚೈತನ್ಯ ಗ್ರಾಮೀಣ ಅಭಿವೃದ್ಧಿ ಎಜುಕೇಷನಲ್ ಟ್ರಸ್ಟ್ ಅಧ್ಯಕ್ಷ ಭೀಮರಾಜ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಎಸ್‌ಎಲ್‌ಆರ್ ಕಂಪನಿಯ ಸಿಬ್ಬಂದಿಗಳಾದ ಮಾರುತಿ ಗೋಸಿ, ವೆಂಕಟೇಶ್, ಪಂಪಾಪತಿ, ಎಸ್‌ಡಿಎಂಸಿ ಅಧ್ಯಕ್ಷ ದುರುಗಪ್ಪ, ತರಬೇತಿ ಶಿಕ್ಷಕಿ ಸುವರ್ಣಮ್ಮ ಹಾಗೂ ತರಬೇತಿ ಪಡೆದ ಮಹಿಳೆಯರಾದ ಸೊನ್ನದ ವಸಂತ, ದುರುಗಮ್ಮ, ಉಷಾ ಸೇರಿದಂತೆ ಶಿಬಿರಾರ್ಥಿಗಳು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

> "ಆರು ತಿಂಗಳ ಉಚಿತ ಹೊಲಿಗೆ ತರಬೇತಿ ಪಡೆದ ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನು ವಿತರಿಸಲಾಗಿದೆ. ತರಬೇತಿ ಪಡೆದವರು ಸ್ವಯಂ ಉದ್ಯೋಗ ಆರಂಭಿಸಿ ತಮ್ಮ ಕುಟುಂಬದ ಆರ್ಥಿಕ ಸಂಕಷ್ಟ ನಿವಾರಿಸಿಕೊಳ್ಳಬೇಕು."
>
> **– ಕೆ. ಮಲ್ಲಿಕಾರ್ಜುನ**
>
> ಸಿಎಸ್‌ಆರ್ ವಿಭಾಗದ ಮುಖ್ಯಸ್ಥ, ಎಸ್‌ಎಲ್‌ಆರ್ ಮೆಟಾಲಿಕ್ಸ್

## 'ಹಿಂದೂ ಸಮಾವೇಶ'ಕ್ಕೆ ತೀವ್ರ ಪ್ರತಿರೋಧ

▶▶ ಮೊದಲನೇ ಪುಟದಿಂದ

ಬಸವಣ್ಣನವರ ವಚನಗಳನ್ನು ಮಾತ್ರವಲ್ಲ, ಇಡೀ ಶೋಷಿತ ವರ್ಗದ ಚಿಂತನೆಗಳನ್ನೇ ನಾಶಗೊಳಿಸುವ ಪ್ರಯತ್ನ ಇದಾಗಿದೆ. ಇದಕ್ಕೆ ಪ್ರತಿರೋಧ ವ್ಯಕ್ತಪಡಿಸಲೇಬೇಕು" ಎಂದು ಹೇಳಿದರು.

ದಲಿತ ಮುಖಂಡ ಮುತ್ತು ಬಿಳೆಯಲಿ ಮಾತನಾಡಿ, "ಆರ್‌ಎಸ್‌ಎಸ್ ಪ್ರಚಾರಕರಾದ ಕನ್ಹೇರಿ ಸ್ವಾಮೀಜಿ ಎಲ್ಲೆಡೆ ಅಶ್ಲೀಲ ಹಾಗೂ ಪ್ರಚೋದನಕಾರಿ ಭಾಷಣಗಳ ಮೂಲಕ ಕೋಮುದ್ವೇಷ ಹರಡುತ್ತಿದ್ದಾರೆ. ಈಗ ಗದಗದ ಸೌಹಾರ್ದತೆಯನ್ನೇ ಹಾಳು ಮಾಡುವ ಪ್ರಯತ್ನ ನಡೆಯುತ್ತಿದೆ" ಎಂದು ಆರೋಪಿಸಿದರು.

"ಈ ಹಿಂದೆ ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಅವರಿಗೆ ಪ್ರವೇಶ ನಿರಾಕರಿಸಲಾಗಿತ್ತು. ಗದಗದಲ್ಲೂ ಜಿಲ್ಲೆಗೆ ಪ್ರವೇಶಿಸದಂತೆ ನೋಡಿಕೊಳ್ಳಬೇಕು. ವಚನ ದರ್ಶನ ಕಾರ್ಯಕ್ರಮದ ಸಂದರ್ಭದಲ್ಲಿಯೇ ನಾವು ಪ್ರತಿರೋಧ ವ್ಯಕ್ತಪಡಿಸಿದ್ದೆವು. ಇಂತಹ ಕೋಮುವಾದಿಗಳ ವಿರುದ್ಧ ಜಿಲ್ಲಾವ್ಯಾಪಿ ಹೋರಾಟ ನಡೆಸಬೇಕು" ಎಂದು ಹೇಳಿದರು.

*"ಮಠಗಳ ನಿಲುವುಗಳ ಬಗ್ಗೆ ಆತ್ಮಾವಲೋಕನ ಅಗತ್ಯ"*

ಬಂಡಾಯ ಸಾಹಿತಿ ಬಸವರಾಜ ಸೂಳಿಬಾವಿ ಮಾತನಾಡಿ, "ನಾವು ಭಾವನಾತ್ಮಕ ಹಾಗೂ ವೈಚಾರಿಕವಾಗಿ ಬಸವಣ್ಣನವರ ಆಶಯಗಳನ್ನು ಒಪ್ಪಿಕೊಂಡವರು. ಆದರೆ ಕೆಲವು ಮಠಗಳು ಲಿಂಗಾಯತ ಹಾಗೂ ಶರಣ ಸಂಸ್ಕೃತಿಯಂತೆ ನಡೆದುಕೊಳ್ಳುತ್ತಿಲ್ಲ. ಇಡೀ ಜಿಲ್ಲೆಯ ವಾತಾವರಣವೇ ಬೇರೆಯಾಗಬಹುದಾಗಿತ್ತು" ಎಂದು ಬೇಸರ ವ್ಯಕ್ತಪಡಿಸಿದರು.

**ದಲಿತ ಹಿರಿಯ ಮುಖಂಡರಾದ :** ಎಸ್.ಎನ್. ಬಳ್ಳಾರಿ ಅವರು ಮಾತನಾಡಿ, "ತಿಳಿದವರೇ, ಅರಿವಿರುವವರೇ ಆಮಿಷಗಳಿಗೆ ಒಳಗಾಗಿ ಹಿಂದೂ ಸಮಾವೇಶದಲ್ಲಿ ಭಾಗವಹಿಸುತ್ತಿದ್ದಾರೆ. ಇದು ದುಃಖಕರ ಸಂಗತಿ. ಆದ್ದರಿಂದ ಮನೆ ಮನೆಗೆ, ವಾರ್ಡ್ ವಾರ್ಡ್‌ಗೆ ತೆರಳಿ ಜಾಗೃತಿ ಮೂಡಿಸುವ ಮೂಲಕ ಸಮಾವೇಶದ ವಿರುದ್ಧ ಜನಾಭಿಪ್ರಾಯ ನಿರ್ಮಿಸಬೇಕು" ಎಂದು ಹೇಳಿದರು.

ಸಭೆಯಲ್ಲಿ ಬಸವರಾಜ ಎಂ. ಕಡೇಮನಿ, ಎಚ್.ಎಸ್. ಸೊಂಪೂರ, ಕೊಟ್ರಬಸಪ್ಪ ಚಟ್ಟಿ, ವಿ.ಕೆ. ಕರೇಗೌಡ್ರ, ದಿಲೀಪಕುಮಾರ ಹಲವಾಗಲಿ, ಪ್ರಕಾಶ ಅಸುಂಡಿ, ಮಂಜುನಾಥ ಹಗೇದಾಳ, ಎಸ್.ಐ. ಪವಾಡಗೌಡ್ರ, ಆನಂದ ಶಿಂಗಾಡಿ, ನಾಗಭೂಷಣ ಬಡಗನ್ನವರ, ಸುವರ್ಣ ಗಾಳಪ್ಪನವರ, ಸುಜಾತಾ ವಾರದ, ಮಂಗಳಾ ನಾಲವಾಡ, ಬಾಲರಾಜ ಅರಬರ, ಶಿವಾನಂದ ತಮ್ಮಣ್ಣವರ, ಪರಶು ಕಾಳೆ, ಅನಿಲ್ ಕಾಳೆ, ಬಸೂ ಬಿಳೆಯಲಿ, ಮಂಜುನಾಥ ಹಗೇದಾಳ ಸೇರಿದಂತೆ ಜಾಗತಿಕ ಲಿಂಗಾಯತ ಮಹಾಸಭಾ, ಬಸವ ಕೇಂದ್ರ, ಬಸವದಳ, ಮೇ ಸಾಹಿತ್ಯ ಮೇಳ, ದಲಿತ ಕಲಾ ಮಂಡಳಿ, ದಲಿತ ಸಂಘಟನೆಗಳ ಒಕ್ಕೂಟ ಹಾಗೂ ವಿವಿಧ ಪ್ರಗತಿಪರ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

**ಗದಗ–ಬೆಟಗೇರಿ ನಗರಸಭೆ ಕಾರ್ಯಾಲಯ–582101**

ಜಿಲ್ಲಾ: ಗದಗ, ರಾಜ್ಯ: ಕರ್ನಾಟಕ

ದೂ:08372–259932, ಇ–ಮೇಲ್: ka.gadag.betageri.cmc@gmail.com

ನಂ.ಗಬೆನಸ/ತಾಂ.ವಿ/ವಹಿ/ ಟೆಂಡರ್/2026–27 ದಿನಾಂಕ: 20–05–2026

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕತೆ ಅಧಿನಿಯಮ 1999–2000 ರ ಪ್ರಕಾರ ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯುಮೆಂಟ್ಸ್ ನಿಯಮದನ್ವಯ ಗದಗ–ಬೆಟಗೇರಿ ನಗರಸಭೆಯ ಸನ್ 2026–27 ನೇ ಸಾಲಿನ ನಗರಸಭೆ ಅನುದಾನ **ಒಟ್ಟು 01** ಕಾಮಗಾರಿಗಳಿಗೆ **ಇಂಡೆಂಟ್ ನಂ:DMA/2026-27/OW/WORK_INDENT:58650** ಟೆಂಡರ್‌ಗಿಟ್ಟ ಮೊತ್ತ **ರೂ.11.50 ಲಕ್ಷಗಳಿಗೆ** ಟೆಂಡರ್ ಆಹ್ವಾನಿಸಿದ್ದು, ಆಸಕ್ತರು ಇ–ಸಂಗ್ರಹಣಾ ವೇದಿಕೆಯಡಿ. ವಾರ್ಡ ನಂ 22 ಹಾಗೂ ವಾರ್ಡ ನಂ 03ರಲ್ಲಿ ಟೆಂಡರ್ ಕರೆದಿದ್ದು. http://kppp.karnataka.gv.in ನಲ್ಲಿ ಸಂಪರ್ಕಿಸಿ ಟೆಂಡರ್ ಸಲ್ಲಿಸಬಹುದಾಗಿದೆ.

ಅದರಂತೆ ಬಿಡ್‌ದಾರರು ಟೆಂಡರ್ ವಿವರಗಳನ್ನು ಕೆ.ಪಿ.ಪಿ. ಪೋರ್ಟಲ್‌ನಲ್ಲಿ ಪಡೆದು, ಸಂಬಂಧಿಸಿದ ಇಎಂಡಿ ಟೆಂಡರ್ ಫೀಗಳನ್ನು Electronic ಪದ್ಧತಿಯಲ್ಲಿ ತುಂಬಿ ನಿಗದಿ ಪಡಿಸಿದ ದಿನಾಂಕದೊಳಗಾಗಿ ಟೆಂಡರ್ ಸಲ್ಲಿಸಬಹುದಾಗಿದೆ.

| | |
|---|---|
| ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ ಮತ್ತು ಸಮಯ | 01-06-2026 Up to 16.00 Hours |
| ತಾಂತ್ರಿಕ ಬಿಡ್ಡುಗಳನ್ನು ತೆರೆಯುವ ದಿನಾಂಕ ಮತ್ತು ಸಮಯ (Technical Bids) | 02-06-2026 Up to 16.30 Hours |

ಸದರಿ ಟೆಂಡರ್‌ಗೆ ಸಂಭಂಧಿಸಿದ ದಿನಾಂಕ ಹಾಗೂ ಇತರೆ ಬದಲಾವಣೆಗಳಾದಲ್ಲಿ kppp portal ನಲ್ಲಿ ಪ್ರಕಟಿಸಲಾಗುವುದು, ಪತ್ರಿಕಾ ಪ್ರಕಟಣೆಯಲ್ಲಿ ಪ್ರಕಟಿಸಲಾಗುವುದಿಲ್ಲ.

ಸಹಿ/–
ಪೌರಾಯುಕ್ತರು
ಗದಗ–ಬೆಟಗೇರಿ ನಗರಸಭೆ

DIPR/Gadag/78/Deshpandepublicity/2026-27

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka